ಸಂಪುಟ : 10 ಸಂಚಿಕೆ: 31 ಪುಟ : 4+2 ಬೆಲೆ: 3.00 ಶನಿವಾರ ಮಾರ್ಚ 1 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 31 Pages : 4+2 Price : 3.00 Saturday March 1 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಕಸಾಪದಿಂದ ದತ್ತಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಮಾರ್ಚ್ 1ರಂದು ಸಂಜೆ 6 ಗಂಟೆಗೆ ತೆ-ರೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನ, ಕಸಾಪ ಕಾರ್ಯಾಲಯದಲ್ಲಿ ನಾರಾಯಣಭಟ್ ಶಿವಪೂರ ಹಾಗೂ ಕು.ಶಿ. ಹರಿದಾಸಭಟ್ ಅವರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ವಿವೇಕಾನಂದಗೌಡ ಪಾಟೀಲ ವಹಿಸುವರು. 'ದ.ರಾ. ಬೇಂದ್ರೆಯವರ ಕಾವ್ಯದಲ್ಲಿ ಆಧ್ಯಾತ್ಮಿಕ ಚಿಂತನೆಗಳು' ಕುರಿತು ಸಾಹಿತಿಗಳಾದ ಡಾ. ಎಸ್.ವಿ. ತಮ್ಮನಗೌಡ್ರ ಉಪನ್ಯಾಸ ನೀಡುವರು. ಡಯಟ್ ಸಂಸ್ಥೆಯ ಅಧೀಕ್ಷಕರಾದ ಶ್ರೀನಿವಾಸ ಕುಲಕರ್ಣಿ ಅವರಿಂದ ದಾಸವಾಣಿ ಜರುಗಲಿದೆ. ದತ್ತಿ ದಾನಿಗಳಾದ ಡಾ. ಅನಂತ ಶಿವಪೂರ, ಅನಂತಮೋಹನ ಭಟ್, ಜಯದೇವಭಟ್ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಸಾಹಿತ್ಯಾಭಿಮಾನಿಗಳು, ಪರಿಷತ್ತಿನ ಸದಸ್ಯರು ಪಾಲ್ಗೊಳ್ಳಬೇಕೆಂದು ಕಾರ್ಯದರ್ಶಿಗಳಾದ ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರು ಮಾರ್ಚ್ 1 ರಂದು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಬೆಳಿಗ್ಗೆ 10 ಗಂಟೆಗೆ ಗದಗ ನಗರದ ವಿಡಿಎಸ್‌ಟಿ ಮೈದಾನದಲ್ಲಿ ಫಲಪುಷ್ಪ ಪ್ರದರ್ಶನ ಹಾಗೂ ಜಿಲ್ಲಾ ಮಟ್ಟದ ಸರಸ್ ಮೇಳ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ನಂತರ 10.30 ಗಂಟೆಗೆ ಶ್ರೀ ಕೆ ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಗದಗ ಜಿಲ್ಲಾ ಮಟ್ಟದ ಉದ್ಯೋಗ ಮೇಳ ಕಾರ್ಯಕ್ರಮಕ್ಕೆ ಚಾಲನೆ ನೀಡುವರು.

ನಂತರ ಸಾಯಂಕಾಲ 4:30 ಗಂಟೆಗೆ ಗದಗನಿಂದ ರಸ್ತೆ ಮೂಲಕ ಹಂಪಿಗೆ ಪ್ರಯಾಣಿಸಿ ಹಂಪಿ ಉತ್ಸವ 2025 ರಲ್ಲಿ ಪಾಲ್ಗೊಂಡು, ರಾತ್ರಿ 10 ಗಂಟೆಗೆ ಗದಗಿಗೆ ಆಗಮಿಸಿ ವಾಸ್ತವ್ಯ ಮಾಡುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

ಕಾನೂನು ಸಮರದಲ್ಲಿ ಸೋತ ಬಿಜೆಪಿ । ನಗರಸಭೆ ಅಧ್ಯಕ್ಷರಾಗಿ ಕೃಷ್ಣಾ ಪರಾಪುರ, ಉಪಾಧ್ಯಕ್ಷರಾಗಿ ಶಕುಂತಲಾ ಅಕ್ಕಿ ಆಯ್ಕೆ

ನಗರಸಭೆ ಹಿಡಿತ ಸಾಧಿಸಿದ ಕಾಂಗ್ರೆಸ್

■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು ಹೋರಾಟದ ನಡುವೆಯೇ ನಗರಸಭೆಯ 2ನೇ ಅವಧಿಗೆ ನೂತನ ಅಧ್ಯಕ್ಷರಾಗಿ 16ನೇ ವಾರ್ಡಿನ ಕಾಂಗ್ರೆಸ್ ಸದಸ್ಯ ಕೃಷ್ಣಾ ಪರಾಪುರ ಹಾಗೂ ಉಪಾಧ್ಯಕ್ಷರಾಗಿ 4ನೇ ವಾರ್ಡಿನ ಸದಸ್ಯೆ ಶಕುಂತಲಾ ಅಕ್ಕಿ ಆಯ್ಕೆಯಾಗಿದ್ದು, ಕಾಂಗ್ರೆಸ್ ಮತ್ತೊಮ್ಮೆ ನಗರಸಭೆಯ ಚುಕ್ಕಾಣಿ ಹಿಡಿದಿದೆ.

ನಗರಸಭೆಯ ಬಿಜೆಪಿ ಸದಸ್ಯರಾದ ಉಷಾ ದಾಸರ, ಅನಿಲ ಅಬ್ಬಿಗೇರಿ, ಗುಳಪ್ಪ ಮುಷಿಗೇರಿ, ಶುಕ್ರವಾರ ಮಧ್ಯಾಹ್ನದವರೆಗೂ ಹೈಕೋರ್ಟ್‌ನಲ್ಲಿ ಕಾನೂನು ಹೋರಾಟ ನಡೆಸಿದರು. ಸದಸ್ಯರ ಮನವಿ ಪುರಸ್ಕರಿಸಿದ ಕೋರ್ಟ್, ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆಯನ್ನು ಮಾರ್ಚ್ 5ರವರೆಗೆ ಮುಂದೂಡಿ ಆದೇಶ ಹೊರಡಿಸಿತು. ಆದರೆ ಕೋರ್ಟ್ ಆದೇಶದ ಪ್ರತಿ ಸಕಾಲದಲ್ಲಿ ಚುನಾವಣೆ ಅಧಿಕಾರಿಗಳಿಗೆ ತಲುಪದ ಕಾರಣ ಬಿಜೆಪಿ ಸದಸ್ಯರು ಸೋಲು ಅನುಭವಿಸಬೇಕಾಯಿತು.

ಧಾರವಾಡ ಹೈಕೋರ್ಟ್ ಪೀಠವು, ಪ್ರಾದೇಶಿಕ ಆಯುಕ್ತರ ಮುಂದಿನ ಆದೇಶ ಆಧರಿಸಿ ಶುಕ್ರವಾರ ನಡೆಯುವ ಅಧ್ಯಕ್ಷ, ಉಪಾಧ್ಯಕ್ಷರ ಚುನಾವಣೆಯಲ್ಲಿ ಮತದಾನಕ್ಕೆ ಅವಕಾಶ ಕಲ್ಪಿಸಿ ಗುರುವಾರ ಆದೇಶ ಹೊರಡಿಸಿತ್ತು. ಆದರೆ, ಮತದಾನ ಮಾಡುವ ಉತ್ಸಾಹದಲ್ಲಿದ್ದ ಸದಸ್ಯರಿಗೆ ಗುರುವಾರ ಸಂಜೆಯೇ ಪ್ರಾದೇಶಿಕ ಆಯುಕ್ತರು ಶಾಕ್ ನೀಡಿದರು.

ಹೈಕೋರ್ಟ್ ಸೂಚನೆಯಂತೆ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ಗುರುವಾರ ಮಧ್ಯಾಹ್ನ 3 ಗಂಟೆಗೆ ವಿಚಾರಣೆ ನಡೆಯಿತು. ಇತ್ತ ಹೈಕೋರ್ಟ್ ನೀಡಿದ ಆದೇಶವನ್ನೂ ಪ್ರಾದೇಶಿಕ ಆಯುಕ್ತರು ಪರಿಗಣಿಸಿ, ಮತ್ತೊಮ್ಮೆ ಮೂವರು ಸದಸ್ಯರನ್ನು ಅಮಾನತು ಮಾಡಿ ಗುರುವಾರ ಸಂಜೆ 6.30ರ ವೇಳೆಗೆ ಮರು ಜಾರಿಗೊಳಿಸಿದೆ.

▸▸ 3ನೇ ಪುಟಕ್ಕೆ

ಪೊಲೀಸ್ ಸರ್ಪಗಾವಲು

ಚುನಾವಣೆ ನಿಮಿತ್ತ ನಗರಸಭೆ ಸುತ್ತಮುತ್ತ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಜಿಲ್ಲಾಧಿಕಾರಿಗಳು ನಿಷೇಧಾಜ್ಞೆ ಜಾರಿಗೊಳಿಸಿದ್ದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸ್ವತಃ ಬೀದಿಗಳಿದು, ಕಾರ್ಯಕರ್ತರು ಒಂದೆಡೆ ಸೇರದಂತೆ ಸೂಚನೆ ನೀಡುತ್ತಿದ್ದರು. ಗಾಂಧಿ ವೃತ್ತದಿಂದ ಝಂಡಾ ಸರ್ಕಲ್‌ವರೆಗೆ ಬ್ಯಾರಿಕೇಡ್ ಹಾಕಿ, ಅಂಗಡಿಗಳನ್ನು ಬಂದ್ ಮಾಡಿಸಲಾಗಿತ್ತು.

ಬಿಜೆಪಿಯವರಿಂದ ಸಭಾತ್ಯಾಗ

ನಿಗದಿತ ಸಮಯಕ್ಕಿಂತ ಮುಂಚಿತವಾಗಿಯೇ 15 ಜನ ಬಿಜೆಪಿ ಸದಸ್ಯರು ಹಾಗೂ ಸಂಸದ ಬೊಮ್ಮಾಯಿ ಸಭಾಂಗಣದಲ್ಲಿ ಉಪಸ್ಥಿತರಿದ್ದರು. ಹಾಜರಾತಿ ಪುಸ್ತಕಕ್ಕೆ ಸಹಿ ಮಾಡಿ, ಹೈಕೋರ್ಟ್‌ನಿಂದ ಆದೇಶ ಬಂದಿದ್ದು, ಅದನ್ನು ಪರಿಗಣಿಸಿ ಮುಂದಿನ ಪ್ರಕ್ರಿಯೆ ಕೈಗೊಳ್ಳಬೇಕು ಮನವಿ ಮಾಡಿದರು.

ಆದರೆ ಈವರೆಗೆ ಯಾವುದೇ ಆದೇಶ ಬಂದಿಲ್ಲ ಎಂದು ಚುನಾವಣೆ ಅಧಿಕಾರಿ ಗಂಗಪ್ಪ ಎಂ ತಿಳಿಸಿದರಲ್ಲದೆ, ಮಧ್ಯಾಹ್ನ 2 ಗಂಟೆಗೆ ಚುನಾವಣೆ ಪ್ರಕ್ರಿಯೆ ಆರಂಭಿಸಿದರು. ಈ ವೇಳೆ ಹೈಕೋರ್ಟ್ ಆದೇಶ ಮೀರಿಯೂ ಚುನಾವಣೆ ನಡೆಸುವುದು ಸರಿಯಲ್ಲ ಎಂದು ಆರೋಪಿಸಿ ಬಸವರಾಜ ಬೊಮ್ಮಾಯಿ ಹಾಗೂ ಬಿಜೆಪಿ ಸದಸ್ಯರು ಸಭಾತ್ಯಾಗ ಮಾಡಿ ಹೊರನಡೆದರು.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಬೇಸಿಗೆ ಪ್ರಾರಂಭವಾದ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ವ್ಯವಸ್ಥಿತ ಪೂರೈಕೆ ಕುರಿತಂತೆ ಅಧಿಕಾರಿಗಳು ಗಮನ ವಹಿಸಬೇಕು. ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಪೂರೈಕೆಯಲ್ಲಿ ಯಾವುದೇ ತೊಂದರೆಯಾಗದಂತೆ ಕಾರ್ಯ ನಿರ್ವಹಿಸಬೇಕು. ತಾಲೂಕಾ ಮಟ್ಟದಲ್ಲಿಯೂ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಬೇಕು. ಮುಂದಿನ ದಿನಗಳಲ್ಲಿ ಸಂಭವಿಸಬಹುದಾದ ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಖಾಸಗಿ ಬೋರ್‌ವೆಲ್‌ಗಳ ಮುಖಾಂತರ ನೀರು ಪೂರೈಸಲು ತಯಾರಿ ಮಾಡಿಟ್ಟುಕೊಳ್ಳಬೇಕು.

ಈಗಿರುವ ಬೋರ್‌ವೆಲ್‌ಗಳನ್ನು ರಿಪೇರಿ ಮಾಡಿಸಿ ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು. ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಪೂರೈಕೆಗೆ ಸಂಬಂಧಿಸಿದಂತೆ ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಕಾರ್ಯ ನಿರ್ವಹಿಸಬೇಕು. ಮುಂಬರುವ ಬೇಸಿಗೆ ದಿನಗಳಲ್ಲಿ ಬಿಸಿಲಿನ ತಾಪ ಹೆಚ್ಚಾಗುವ ಸಂಭವವಿರುವುದರಿಂದ ಹೀಟ್‌ವೇವ್‌ನಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿದೆ. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸೂಚಿಸಿದ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವಂತೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಹಿರಿಯ ನಾಗರಿಕರು, ಗರ್ಭಿಣಿಯರು, ಚಿಕ್ಕಮಕ್ಕಳಿಗೆ ಬಿಸಿಲಿನ ತಾಪಮಾನದಿಂದ ಆರೋಗ್ಯ ಸಮಸ್ಯೆ ಉಂಟಾಗದಂತೆ ಮುಂಜಾಗ್ರತೆ ವಹಿಸುವಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಪಶು ಸಂಗೋಪನಾ ಇಲಾಖೆಯ ಉಪನಿರ್ದೇಶಕ ನಾಗರಾಜ್ ಎಚ್ ಮಾತನಾಡಿ, ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವಿನ ದಾಸ್ತಾನು ಸಾಕಷ್ಟಿದೆ. ಜಾನುವಾರುಗಳಿಗೆ 41 ವಾರಗಳಿಗಾಗುವಷ್ಟು ಮೇವು ಲಭ್ಯವಿದೆ. ಮುಂಬರುವ ಬೇಸಿಗೆ ನಿಭಾವಣೆಗಾಗಿ ಪೂರ್ವಸಿದ್ಧತೆಗಾಗಿ 8 ಗೋಶಾಲೆಗಳನ್ನು ಗುರುತಿಸಿಟ್ಟುಕೊಳ್ಳಲಾಗಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಮುಂಬರುವ ಬೇಸಿಗೆ ದಿನಗಳಲ್ಲಿ ಬಿಸಿಲಿನ ತಾಪ ಹೆಚ್ಚಾಗುವ ಸಂಭವವಿರುವುದರಿಂದ ಹೀಟ್ ವೇವ್‌ನಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿದೆ. ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ ಐಇಸಿ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಜಿ.ಎಚ್, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಅಬಕಾರಿ ಇಲಾಖೆ ಅಧಿಕಾರಿ ಲಕ್ಷ್ಮೀ ಸೇರಿದಂತೆ ತಾ.ಪಂ ಕಾರ್ಯನಿರ್ವಹಣಾಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಶಿಂಗಟಾಲೂರು ಬ್ರಿಡ್‌ನಲ್ಲಿ ಸದ್ಯ 2.26 ಟಿ.ಎಂ.ಸಿ. ನೀರು ಸಂಗ್ರಹವಿದ್ದು, ಇದರಲ್ಲಿ ಡೆಡ್ ಸ್ಟೋರೇಜ್ 1.42 ಟಿ.ಎಂ.ಸಿ. ನೀರು ಹೊರತುಪಡಿಸಿ ಬಳಕೆಗೆ 1.8 ಟಿ.ಎಂ.ಸಿ. ನೀರು ಲಭ್ಯವಿದೆ. ಈ 1.8 ಟಿ.ಎಂ.ಸಿ. ನೀರಿನಿಂದ ಜಿಲ್ಲೆಯ ಗದಗ-ಬೆಟಗೇರಿ ಸೇರಿದಂತೆ 4 ತಾಲೂಕಿನ ಗ್ರಾಮಗಳಿಗೆ ನೀರು ಪೂರೈಕೆ ಮಾಡಬಹುದಾಗಿದೆ. ಗದಗ-ಬೆಟಗೇರಿ ಅವಳಿ ನಗರಕ್ಕೆ 0.2 ಟಿ.ಎಂ.ಸಿ. ನೀರು ಜೂನ್ ಅಂತ್ಯದವರೆಗೆ ಅಗತ್ಯವಿದ್ದು, ಸದ್ಯ ಸಿಂಗಟಾಲೂರು ಬ್ಯಾರೇಜ್‌ನಲ್ಲಿ ಅಗತ್ಯಕ್ಕೆ ತಕ್ಕಷ್ಟು ನೀರಿನ ಲಭ್ಯತೆ ಇದೆ ಎಂದು ತಿಳಿಸಿದರು.

ಸಂಭ್ರಮದ ಬಿನ್ನಾಳ ಬಸವೇಶ್ವರ ರಥೋತ್ಸವ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮಹಾ ಶಿವರಾತ್ರಿ ಅಂಗವಾಗಿ ಇಲ್ಲಿಯ ಬಿನ್ನಾಳ ಬಸವೇಶ್ವರ ರಥೋತ್ಸವವು ಶುಕ್ರವಾರ ಸಂಜೆ 6ಕ್ಕೆ ಸಂಭ್ರಮದಿಂದ ಜರುಗಿತು.

ಅಲ್ಲಮಪ್ರಭು ದೇವರ ಮಠದ ಸಿದ್ಧಲಿಂಗೆಶ್ವರ ಸ್ವಾಮೀಜಿಗಳು ವಿಧಿ-ವಿಧಾನಗಳೊಂದಿಗೆ ಪೂಜೆ ಸಲ್ಲಿಸುವದರೊಂದಿಗೆ ರಥೋತ್ಸವಕ್ಕೆ ಚಾಲನೆ ನೀಡಿದರು. ಕೋಟೆ ವೀರಭದ್ರೇಶ್ವರ ನಂದಿಕೋಲ ಸಮ್ಮಾಳ ಮೇಳ, ಶ್ರೀ ಕೃಷ್ಣ ಗೊಲ್ಲ ಯುವಕರ ಜಾಂಜ ಮೇಳಗಳು ಭಾಗವಹಿಸಿದ್ದವು. ಭಕ್ತರು ಉತ್ತತ್ತಿ, ಹಣ್ಣುಗಳು ತೆ-ರಿಗೆ ಅರ್ಪಿಸಿ ಸಂಕಲ್ಪವನ್ನು ಸಮರ್ಪಿಸಿದರು.

ಇದಕ್ಕೂ ಪೂರ್ವ ನಂದಿ ಧ್ವಜ ಸ್ಥಾಪನೆಯೊಂದಿಗೆ ಧಾರ್ಮಿಕ ಕಾರ್ಯಕ್ರಮಗಳು ಆರಂಭವಾದವು.

ಬಸವೇಶ್ವರ ದೇವರಿಗೆ ವಿಧಿ-ವಿಧಾನಗಳೊಂದಿಗೆ ರುದ್ರಾಭೀಷೇಕ, ಎಲಿಪೂಜೆ, ಬಾಳೆ ಹಣ್ಣಿನ ಪೂಜೆ ನಡೆಯಿತು. ರಥೋತ್ಸವದ ಚಾಲನೆ ನೀಡುವ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಗ್ರಾ.ಪಂ ಸದಸ್ಯರು, ಗ್ರಾಮದ ಗಣ್ಯರು ಭಾಗವಹಿಸಿದ್ದರು.

ವಾರ್ಡ್ ನಂ.31ರಲ್ಲಿ ವಿವಿಧ ಕಾಮಗಾರಿಗಳನ್ನು ಉದ್ಘಾಟಿಸಿದ ವಿ.ಪ ಸದಸ್ಯ ಎಸ್.ವಿ. ಸಂಕನೂರ

ವಾರ್ಡ್ ಸದಸ್ಯರಿಂದ ಅಭಿವೃದ್ಧಿಗೆ ಪಣ

■ ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದ ನಗರಸಭೆಯ ಕ್ರಿಯಾಶೀಲ ಸದಸ್ಯರಾದ ಶೈಲಾ ಬಾಕಳೆ ಅವರು 31ನೇ ವಾರ್ಡಿನ ಸಂಪೂರ್ಣ ಅಭಿವೃದ್ಧಿಗೆ ಪಣ ತೊಟ್ಟಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮೆಚ್ಚುಗೆ ವ್ಯಕ್ತಪಡಿಸಿದರು.

ಗದಗ-ಬೆಟಗೇರಿಯ 31ನೇ ವಾರ್ಡಿನ ತ್ರೀಕೂಟೇಶ್ವರ ದೇವಸ್ಥಾನದ ಆವರಣದಲ್ಲಿ, ಜೋಡ ಮಾರುತಿ ದೇವಸ್ಥಾನದ ಹತ್ತಿರ, ಕಿಲ್ಲಾ ಓಣಿ, ಭೀಷ್ಮ ಕೆರೆಯ ಸಮೀಪದ ಬನ್ನಿಕಟ್ಟಿ ದೇವಸ್ಥಾನ, ಗುಜ್ಜರಬಸ್ತಿಯಲ್ಲಿ ಅಳವಡಿಸಲಾಗಿರುವ ಒಟ್ಟು 5 ಮಿನಿ ಹೈಮಾಸ್ಟ್ ದೀಪಗಳನ್ನು ಹಾಗೂ ಹಸಿರು ಕೆರೆಯ ಹತ್ತಿರ ಒಂದು ಬೋರ್‌ವೆಲ್ ಉದ್ಘಾಟಿಸಿ ನಂತರ ತ್ರೀಕೂಟೇಶ್ವರ ದೇವಸ್ಥಾನದ ಆವರಣದಲ್ಲಿ ನಡೆದ ಸಮಾರಂಭದಲ್ಲಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಮಾಜಿ ಅಧ್ಯಕ್ಷ ಎಂ.ಎಸ್. ಕರಿಗೌಡ್ರ, ಬಿಜೆಪಿ ಹಿರಿಯರಾದ ಬಿ.ಎಚ್. ಲದ್ವಾ, ಜಗನ್ನಾಥಸಾ ಬಾಂಡಗೆ, ಲುಕ್ಕಣಸಾ ರಾಜೋಳಿ, ಶ್ರೀರಾಮ ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ರಾಜೂ ಖಾನಪ್ಪನವರ, ಶಹರ ಬಿಜೆಪಿ ಅಧ್ಯಕ್ಷ ಸುರೇಶ ಮರಳಪ್ಪನವರ, ಪರಶುರಾಮ ಬದಿ, ಮನ್ನು ದಲಬಂಜನ, ನಾಗರಾಜ ಖೋಡೆ, ರಾಜು ಕಾಟಿಗಾರ, ರಾಜೇಶ ಖೋಡೆ, ಪ್ರಕಾಶ ಕಾಟಿಗರ, ವೆಂಕಟೇಶ ಹಬೀಬ, ರವಿ ಚವ್ಹಾಣ, ಅರ್ಚಕ ಸಂಬಾಜಿ ಕಟ್ಟಿಮನಿ, ರುಕ್ಮಣಿ ಕಾಟಿಗಾರ ಸೇರಿದಂತೆ ವಾರ್ಡಿನ ಗುರು-ಹಿರಿಯರು ಉಪಸ್ಥಿತರಿದ್ದರು.

ಸುಧೀರ ಕಾಟಿಗಾರ ಸ್ವಾಗತಿಸಿದರು. ಶ್ರೀಕಾಂತ ಬಾಕಳೆ ನಿರೂಪಿಸಿದರು. ಪರಶುರಾಮ ಮಿಸ್ಕಿನ ವಂದಿಸಿದರು.

ಶೈಲಾ ಬಾಕಳೆಯವರು ತಮ್ಮ ವಾರ್ಡಿನಲ್ಲಿ ಹೈಮಾಸ್ಟ್ ದೀಪ, ರಸ್ತೆ, ಗಟಾರ ಮತ್ತು ಬೋರ್‌ವೆಲ್ ಸೇರಿದಂತೆ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ವಾರ್ಡಿನ ಜನತೆಗೆ ಮುಖ್ಯವಾಗಿ ಕುಡಿಯುವ ನೀರು, ರಸ್ತೆ, ಗಟಾರ, ಬೀದಿದೀಪ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಿದರೆ ಚುನಾವಣೆಯ ಸಂದರ್ಭದಲ್ಲಿ ಪ್ರಚಾರದ ಅಗತ್ಯವಿರುವದಿಲ್ಲ, ಪ್ರತಿಸ್

ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸಾರ್ವಜನಿಕರಿಗೆ ತಿಳಿಸುವುದೆನೆಂದರೆ ಮಾರ್ಚ್ 1 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 2 – ವೆಲ್ಫೇರ, ಕುಷ್ಟಗಿ ಚಾಳ, ಸ್ಲಾಬ್ ಮನೆ. ವಾರ್ಡ್ ನಂ. 11 – ಇರಾಣಿ ಕಾಲೋನಿ, ಕರಿಯಮ್ಮ ಕಲ್ಲು, ಗಣಪತಿ ಕಟ್ಟಿ, ಚರ್ಚ್, ಗಾಣಿಗೇರ ಭವನ. ವಾರ್ಡ್ ನಂ 22 – ಗಂಗಿಮಡಿ, ದೊಡ್ಡ ಮಸೂತಿ ಪೂರ್ತಿ ಭಾಗಗಳು.

ವಾರ್ಡ್ ನಂ. 34 – ಕರಜೊಳ್ಳಿ ಮಠ, ಸೇವಾಲಾಲ್ ನಗರ, ಗರಗದವರ ಲೈನ್, ಮುಂಡರಗಿ ಲೇಔಟ್, ಸ್ಕೂಲ್ ಭಾಗ. ವಾರ್ಡ್ ನಂ. 35 – ಬಾಪೂಜಿನಗರ, ಕೆ ಇ ಬಿ ಲೇಔಟ್. ವಾರ್ಡ್ ನಂ. 8, 9, 10 – ಹೆಲ್ತ್ ಕ್ಯಾಂಪ್, ಕುರಹಟ್ಟಿ ಪೇಟೆ, ಕಬಾಡಿ ರಸ್ತೆ, ತೆಗ್ಗಿನ ಲಾಟ್, ಬೋರೆಗಾರ ಓಣಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 21, 23 – ಆರೋಗೇರಿ, ಕಗನಳ್ಳಿ, ಹೆಬಸೂರ, ಹೊನ್ನೇತಮ್ಮನ ಗುಡಿ 2 ಭಾಗಗಳು, ಸೋಮನಗೌಡರ ಲೈನ್, ಕಮತರ ಲೈನ್, ಬನ್ನಿ ಕಾಳಮ್ಮನಗುಡಿ, ಲಕ್ಕುಂಡಿಯವರ ಲೈನ್, ಮಾನ್ವಿಯವರ ಲೈನ್, ಗೆಳೆಯರ ಬಳಗ, ಗಣಪತಿ ಗುಡಿ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕು. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯಾರ್ಥಿಗಳಿಗೆ ಉಚಿತ ಪ್ರಯಾಣಕ್ಕೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್ 1 ರಿಂದ ನಡೆಯಲಿರುವ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಹಾಗೂ ದಿ. 21-03-2025 ರಿಂದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ವಾರ್ಷಿಕ ಪರೀಕ್ಷೆಗಳು ಪ್ರಾರಂಭವಾಗಲಿದ್ದು, ಅವರ ವಿದ್ಯಾಸಂಸ್ಥೆಯ ಹೊರತಾಗಿ ಇತರೆ ವಿದ್ಯಾ ಸಂಸ್ಥೆಗಳಿಗೆ ಪರೀಕ್ಷಾ ಕೇಂದ್ರಗಳ ನಿಯೋಜನೆಯಾಗಿರುವುದರಿಂದ ವಿದ್ಯಾರ್ಥಿಗಳ ವಾಸಸ್ಥಳದಿಂದ ಪರೀಕ್ಷಾ ಕೇಂದ್ರಗಳವರೆಗೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಲಾಗಿದೆ.

ದ್ವಿತೀಯ ಪಿ.ಯು.ಸಿ ಪರೀಕ್ಷೆ ನಡೆಯುವ ದಿನಾಂಕಗಳಂದು, ಅಂದರೆ ದಿ:01-03-2025 ರಿಂದ 20-03-2025 ರವರೆಗೆ ಹಾಗೂ ಎಸ್.ಎಸ್.ಎಲ್.ಸಿ ಪರೀಕ್ಷೆ ನಡೆಯುವ ದಿನಾಂಕಗಳಂದು, ಅಂದರೆ ದಿನಾಂಕ:21-03-2025 ರಿಂದ 04-04-2025 ರವರೆಗೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ದ್ವಿತೀಯ ಪಿ.ಯು.ಸಿ / ಎಸ್.ಎಸ್.ಎಲ್.ಸಿ ಪರೀಕ್ಷೆಯ ಪ್ರವೇಶ ಪತ್ರ ತೋರಿಸಿ ತಮ್ಮ ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರಗಳಿಗೆ ಹೋಗಲು ಹಾಗೂ ಪರೀಕ್ಷೆ ಮುಗಿಸಿ ವಾಸ ಸ್ಥಳಕ್ಕೆ ಹಿಂದಿರುಗಲು ಸಂಸ್ಥೆಯ ನಗರ, ಉಪನಗರ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣ ಮಾಡಬಹುದಾಗಿದೆ ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

ದರಪಟ್ಟಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ, ಸೂಡಿ 2024-25ನೇ ಸಾಲಿನ ಗದಗ ಜಿಲ್ಲಾ ಪಂಚಾಯತ್ ವಾರ್ಷಿಕ ಕ್ರಿಯಾ ಯೋಜನೆಯ ಅನುದಾನದ ಅಡಿಯಲ್ಲಿ ವೃತ್ತಿಗಳ ಅನುಸಾರದಂತೆ ಪ್ರಾಯೋಗಿಕ ಪಾಠಕ್ಕೆ ಬೇಕಾದ ಸಾಮಗ್ರಿಗಳನ್ನು ಖರೀದಿಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿ ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಪೂರೈಕೆದಾರರು ಮಾರ್ಚ್ 5 ರ ಮಧ್ಯಾಹ್ನ 3 ಗಂಟೆಯೊಳಗಾಗಿ (ರಜಾ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸತಕ್ಕದ್ದು. ದರ ನಮೂದಿಸುವಾಗ ಸಾಗಾಣಿಕೆ ವೆಚ್ಚ ಹಾಗೂ ತೆರಿಗೆ ಒಳಗೊಂಡಂತೆ ದರವನ್ನು ನಮೂದಿಸುವುದು. ದರಪಟ್ಟಿಯನ್ನು ಪ್ರಾಚಾರ್ಯರು, ಸರ್ಕಾರಿ ಕೈಗಾರಿಕಾ ಸಂಸ್ಥೆ ಸೂಡಿ ಇವರ ಹೆಸರಿನಲ್ಲಿ ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಚಾರ್ಯರ ಮೊಬೈಲ್ ನಂ. 6360488232, ಹಾಗೂ ಕಿರಿಯ ತರಬೇತಿ ಅಧಿಕಾರಿಯವರ ಮೊಬೈಲ್ ಸಂಖ್ಯೆ 9686904251 ಸಂಪರ್ಕಿಸಬಹುದಾಗಿದೆ ಎಂದು ಸೂಡಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಉತ್ಸವದ ಅಂಗವಾಗಿ ವಿವಿಧ ಕಾರ್ಯಕ್ರಮ

ಶಿವಜ್ಞಾನದ ಅರಿವು ಜೀವನ ಸಾಕ್ಷಾತ್ಕಾರಕ್ಕೆ ಸೋಪಾನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಉತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳು ಯಶಸ್ವಿಯಾಗಿ ಜರುಗಿದವು.

ಕಾರ್ಯಕ್ರಮವನ್ನು ತಹಸೀಲ್ದಾರ ವಾಸುದೇವ ಸ್ವಾಮಿ ಉದ್ಘಾಟಿಸಿ ಮಾತನಾಡಿ, ದೇವಸ್ಥಾನಗಳು ನಮ್ಮ ಹೆಮ್ಮೆಯ ಪ್ರತೀಕ. ಅಲ್ಲಿ ನಿರಂತರವಾಗಿ ಧಾರ್ಮಿಕ ಚಟುವಟಿಕೆಗಳು ನಡೆಯುತ್ತಿರಬೇಕು. ಪ್ರಾಚೀನ ದೇವಸ್ಥಾನಗಳಲ್ಲಿ ಸಂಗೀತ, ಸಾಹಿತ್ಯ, ಸಾಂಸ್ಕೃತಿಕ, ಕಲಾತ್ಮಕ ಕಾರ್ಯಕ್ರಮಗಳನ್ನು ಸಂಘಟಿಸುವುದರಿಂದ ನಮ್ಮ ಸಾಂಸ್ಕೃತಿಕ ಕ್ಷೇತ್ರವನ್ನು ಮತ್ತಷ್ಟು ಶ್ರೀಮಂತಗೊಳಿಸಲು ಸಾಧ್ಯವಾಗುತ್ತದೆ. ಶಿವಜ್ಞಾನದ ಅರಿವು ಜೀವನ ಸಾಕ್ಷಾತ್ಕಾರಕ್ಕೆ ಸೋಪಾನವಾಗಿದೆ. ನಿತ್ಯದ ಬದುಕಿನ ಜಂಜಾಟದ ನಡುವೆಯೂ ದೇವರು, ಧರ್ಮ, ಸತ್ಸಂಗ, ಶಿವ ಸ್ಮರಣೆ ಮಾಡುವುದರಿಂದ ಮನಸ್ಸಿಗೆ ಶಾಂತಿ, ನೆಮ್ಮದಿ ಲಭಿಸುತ್ತದೆ. ಮಕ್ಕಳನ್ನು ಇಂತಹ ಧಾರ್ಮಿಕ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಕ್ರಿಯಾಶೀಲವಾಗಿ ಪಾಲ್ಗೊಳ್ಳುವಂತೆ ಮಾಡುವದು ಅವಶ್ಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಅರ್ಚಕರ ಸಂಘದ ಅಧ್ಯಕ್ಷ ವಿ.ಎಲ್. ಪೂಜಾರ, ಶ್ರೀ ಸೋಮೇಶ್ವರ ಭಕ್ತರ ಟ್ರಸ್ಟ್ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಮಾತನಾಡಿ, ದೇವಸ್ಥಾನಗಳು ನಮ್ಮ ಧರ್ಮ, ಸಂಸ್ಕೃತಿ, ಸಂಪ್ರದಾಯ ಹಬ್ಬ, ಆಚರಣೆಗಳ ಪ್ರತೀಕವಾಗಿವೆ. ಇಂದಿನ ತಂತ್ರಜ್ಞಾನದ ಯುಗದಲ್ಲೂ ಇವುಗಳನ್ನು ಉಳಿಸಿ ಬೆಳೆಸಬೇಕಾಗಿದೆ. ಈ ನಿಟ್ಟಿನಲ್ಲಿ ಡಾ. ಸುಧಾಮೂರ್ತಿಯವರು ದೇವಸ್ಥಾನ ಜೀರ್ಣೋದ್ಧಾರಗೊಳಿಸಿದ ನಂತರ ಪ್ರವಾಸಿಗರ ಸಂಖ್ಯೆ ಹೆಚ್ಚುತ್ತಿದೆ. ಮಲಿಗೆರೆ ಉತ್ಸವದಂತೆ ಶಿವರಾತ್ರಿ ಸಾಂಸ್ಕೃತಿಕ ಕಾರ್ಯಕ್ರಮವು ಸಹ ಮೆರಗು ನೀಡುವಂತೆ ಆಯೋಜಿಸುತ್ತಿರುವದು ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.

ವಸಂತ ಪಾಟೀಲ ಕುಲಕರ್ಣಿ ಮಾತನಾಡಿದರು. ವೇದಿಕೆಯಲ್ಲಿ ಸೋಮೇಶ್ವರ ಜಾತ್ರಾ ಕಮಿಟಿ ಅಧ್ಯಕ್ಷ ಕುಬೇರಪ್ಪ ಮಹಾಂತಶೆಟ್ಟರ, ಅರ್ಚಕರಾದ ಸೋಮನಾಥ ಪೂಜಾರ, ರಾಘವೇಂದ್ರ ಪೂಜಾರ, ನಾಗರಾಜ ಪೂಜಾರ, ಚಿಕ್ಕರಸಯ್ಯ ಪೂಜಾರ, ಸಮೀರ ಪೂಜಾರ ಮುಂತಾದವರಿದ್ದರು. ಶ್ವೇತಾ ಪೂಜಾರ ಸ್ವಾಗತಿಸಿದರು. ದಿಗಂಬರ ಪೂಜಾರ ನಿರೂಪಿಸಿ, ವಂದಿಸಿದರು.

ಹುಬ್ಬಳ್ಳಿಯ ಸಂಕಲ್ಪ ನೃತ್ಯ ಹಾಗೂ ಸಾಂಸ್ಕೃತಿಕ ಸಂಸ್ಥೆಯ ಸಹನಾ ಬನ್ನಿಗಿಡದ ಅವರ ತಂಡದ ಭರತನಾಟ್ಯ, ಬಸವಣ್ಣನವರ ವಚನದ ಜಾನಪದ ನೃತ್ಯ, ಕಂಸಾಳೆ ನೃತ್ಯವನ್ನು ಪ್ರದರ್ಶಿಸಿ ಎಲ್ಲರಿಂದ ಮೆಚ್ಚುಗೆ ಗಳಿಸಿದರು. ನಂತರ ಲಕ್ಷ್ಮೇಶ್ವರದ ವೀರೇಶ ನಡಕಟ್ಟಿನ ಹಾಗೂ ತಂಡದಿಂದ ವೀರಗಾಸೆ, ಹುಬ್ಬಳ್ಳಿಯ ಗುರು ವಿದ್ವಾನ್ ಸುಜಯ ಶಾನಭಾಗ್ ನೃತ್ಯ ಶಾಲೆಯ ವಿದ್ಯಾರ್ಥಿಗಳಾದ ಚಂದನಾ ಕಳಸಾಪುರ, ಸಾನ್ವಿ ಸುಣಗಾರ, ದಾನೇರ್ಶವರಿ ಮಾದಾಪುರಮಠ, ಸ್ಪಂದನ ಡಿ.ಎನ್, ಶಿರೀಶ್ ಸುಣಗಾರ, ಸಿಂಚನಾ ಆದಿ ಭರತನಾಟ್ಯದ ವಿವಿಧ ರೂಪಕಗಳನ್ನು ಅದ್ಭುತವಾಗಿ ಪ್ರದರ್ಶಿಸಿದರು. ಬೆಂಗಳೂರಿನ ಭರತನಾಟ್ಯ ಕಲಾವಿದೆ ತೇಜೋಮಯಿ ಗದ್ದಿ ಹಾಗೂ ಅಮೃತವಾಣಿ ಆರ್ ಭರತನಾಟ್ಯ ಪ್ರದರ್ಶನದ ಮೂಲಕ ಶಿವರಾತ್ರಿ ಸಂಭ್ರಮಕ್ಕೆ ತೆರೆಕಂಡಿತು.

ಸಭಾ ಕಾರ್ಯಕ್ರಮದ ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಆರಂಭದಲ್ಲಿ ಸ್ಥಳೀಯ ಕಲಾವಿದ ರಾಘವೇಂದ್ರ ಕ್ಷತ್ರಿಯ ಬಾನ್ಸುರಿ ವಾದನದ ಮೂಲಕ ಎಲ್ಲರ ಗಮನ ಸೆಳೆದರು. ಇವರಿಗೆ ಕೃಷ್ಣಕುಮಾರ ಕುಲಕರ್ಣಿ ತಬಲಾ ಸಾಥ್ ನೀಡಿದರು. ಬೆಂಗಳೂರಿನ ಭರತನಾಟ್ಯ ಕಲಾವಿದೆ ವಿ.ದೀಪಿಕಾ ಎಚ್.ಎಸ್. ಇವರಿಂದ ಶಿವಶಕ್ತಿ ಆರಾಧನೆ ಪ್ರದರ್ಶನ ಅತ್ಯದ್ಭುತವಾಗಿ ಮೂಡಿಬಂದಿತು. ಪಟ್ಟಣದ ಸಂಗೀತ ಶಿಕ್ಷಕ ಕಲಾವಿದ ಪರಶುರಾಮ್ ಭಜಂತ್ರಿ ಹಾಗೂ ಒಡೆಯರ ಮಲ್ಲಾಪುರದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಸಂಗೀತ ಶಿಕ್ಷಕ ಡಾ.ಅರ್ಜುನ ವಠಾರ ತಂಡದಿಂದ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ ಕಾರ್ಯಕ್ರಮ ನಡೆಯಿತು.

ಲಕ್ಷ್ಮೇಶ್ವರ ತಾಲೂಕಿನ ಒಡೆಯರ ಮಲ್ಲಾಪುರ ಗ್ರಾಮದ ಹತ್ತಿರ ಶುಕ್ರವಾರ ಚಾಲಕನ ನಿಯಂತ್ರಣ ತಪ್ಪಿದ ಬಸ್ಸು ಕಂದಕಕ್ಕೆ ನುಗ್ಗಿದ್ದು, ಅದೃಷ್ಟವಶಾತ್ ಹೆಚ್ಚಿನ ಅಪಾಯ ತಪ್ಪಿದೆ. ಲಕ್ಷ್ಮೇಶ್ವರದಿಂದ ಒಡೆಯರ ಮಲ್ಲಾಪುರ ಮಾರ್ಗವಾಗಿ ಹೊಸರಿತ್ತಿ ಕಡೆಗೆ ಹೋಗುತ್ತಿದ್ದ ಲಕ್ಷ್ಮೇಶ್ವರ ಡಿಪೋ ಬಸ್ (ಕೆಎ-42 ಎಫ್ 1653) ರಸ್ತೆ ತಿರುವುನಲ್ಲಿ ಬಸ್ಸಿನ ಪಾಟಾ ಕಟ್ ಆಗಿ ಚಾಲಕನ ನಿಯಂತ್ರಣ ತಪ್ಪಿ ಕಂದಕಕ್ಕೆ ಮುಗುಚಿದೆ. ಚಾಲಕ ಮತ್ತು ನಿರ್ವಾಹಕ ಮಾತ್ರ ಗಾಯಗೊಂಡಿದ್ದಾರೆ. ಶಾಲಾ-ಕಾಲೇಜು ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿದ್ದರೂ ಯಾವುದೇ ಅಪಾಯವಾಗಿಲ್ಲ.

ಗಾಜಾ ಕದನ ವಿರಾಮದ 2ನೇ ಹಂತದ ಮಾತುಕತೆ ಆರಂಭ: ಈಜಿಪ್ಟ್

■ ವಿಜಯಸಾಕ್ಷಿ ಸುದ್ದಿ, ಗಾಜಾ

ಗಾಜಾ ಕದನ ವಿರಾಮದ ಮುಂದಿನ ಹಂತದ ಕುರಿತು ಇಸ್ರೇಲ್ ಮತ್ತು ಹಮಾಸ್ ನಡುವಿನ ಮಾತುಕತೆಗಳು ಗುರುವಾರ ಪ್ರಾರಂಭವಾಗಿವೆ ಎಂದು ಈಜಿಪ್ಟ್ ಘೋಷಿಸಿದೆ.

ಕದನ ವಿರಾಮವನ್ನು ವಿಸ್ತರಿಸುವ ಮತ್ತು ಬಲಪಡಿಸುವ ಗುರಿಯನ್ನು ಹೊಂದಿರುವ ಈ ಮಾತುಕತೆಗಳು ಶನಿವಾರದಂದು ಕದನ ವಿರಾಮದ ಮೊದಲ ಹಂತದ ಮುಕ್ತಾಯಕ್ಕೆ ಮುಂಚಿತವಾಗಿ ಪ್ರಾರಂಭವಾಗಿವೆ.

ನಡೆಯುತ್ತಿರುವ ಸಂಘರ್ಷವನ್ನು ಕೊನೆಗೊಳಿಸುವ ಯೋಜನೆಗಳನ್ನು ಒಳಗೊಂಡಂತೆ ಎರಡನೇ ಹಂತದ ಮಾತುಕತೆಗಾಗಿ ಇಸ್ರೇಲಿ, ಕತಾರಿ ಮತ್ತು ಯುಎಸ್ ಅಧಿಕಾರಿಗಳು ಕೈರೋದಲ್ಲಿ "ತೀವ್ರವಾದ ಚರ್ಚೆಗಳನ್ನು" ಪ್ರಾರಂಭಿಸಿದ್ದಾರೆ ಎಂದು ವರದಿಯಾಗಿದೆ. ಜನರ ನೋವನ್ನು ನಿವಾರಿಸುವ ಮತ್ತು ಪ್ರಾದೇಶಿಕ ಸ್ಥಿರತೆಗೆ ಕೊಡುಗೆ ನೀಡುವ ಗುರಿಯನ್ನು ಹೊಂದಿರುವ ಗಾಜಾ ಪಟ್ಟಿಗೆ ಮಾನವೀಯ ನೆರವು ವಿತರಣೆ ಕುರಿತು ಸಹ ಈ ಮಾತುಕತೆಯ ಪಟ್ಟಿಯಲ್ಲಿ ಸೇರಿವೆ.

ಎರಡನೇ ಹಂತದ ಗುರಿ ಹಮಾಸ್ ಹಿಡಿದಿಟ್ಟುಕೊಂಡಿರುವ ಜೀವಂತವಾಗಿರುವ ಎಲ್ಲಾ ಒತ್ತೆಯಾಳುಗಳನ್ನು ಹಿಂದಿರುಗಿಸುವುದು ಮತ್ತು ಗಾಜಾದಿಂದ ಇಸ್ರೇಲಿ ಪಡೆಗಳ ಸಂಭಾವ್ಯ ಹಿಂತೆಗೆದುಕೊಳ್ಳುವಿಕೆಯ ಬಗ್ಗೆ ಚರ್ಚಿಸುವುದಾಗಿದೆ. ನಂತರ ನಡೆಯಲಿರುವ ಮೂರನೇ ಹಂತವು ಯಾವುದೇ ಮೃತ ಒತ್ತೆಯಾಳುಗಳ ಮರಳುವಿಕೆಯನ್ನು ಪರಿಹರಿಸುತ್ತದೆ. ಇಸ್ರೇಲಿ ಅಧಿಕಾರಿಗಳ ಪ್ರಕಾರ, ಇನ್ನೂ 59 ಒತ್ತೆಯಾಳುಗಳನ್ನು ಬಂಧಿಸಲಾಗಿದ್ದು, 24 ಮಂದಿ ಜೀವಂತವಾಗಿದ್ದಾರೆ ಎಂದು ನಂಬಲಾಗಿದೆ.

ಆದಾಗ್ಯೂ, ಒಪ್ಪಂದದ ಹಾದಿ ಕಷ್ಟಕರವಾಗಿದೆ. ಇಸ್ರೇಲ್‌ನ ಯುದ್ಧ ಉದ್ದೇಶಗಳಲ್ಲಿ ಹಮಾಸ್‌ನ ಮಿಲಿಟರಿ ಮತ್ತು ಆಡಳಿತ ಸಾಮರ್ಥ್ಯಗಳನ್ನು ಕೆಡವುದು ಸೇರಿದೆ (ಹಮಾಸ್ ಅನ್ನು ಸಂಪೂರ್ಣವಾಗಿ ಕಿತ್ತುಹಾಕುವುದು) ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸ್ಪಷ್ಟಪಡಿಸಿದ್ದಾರೆ.

ಬಿಹಾರ ಚುನಾವಣೆಯಲ್ಲಿ ಎನ್‌ಡಿಎ ಸರ್ವನಾಶವಾಗಲಿದೆ : ತೇಜಸ್ವಿ ಯಾದವ್

■ ವಿಜಯಸಾಕ್ಷಿ ಸುದ್ದಿ, ಬಿಹಾರ

ಅಕ್ಟೋಬರ್-ನವೆಂಬರ್‌ನಲ್ಲಿ ನಡೆಯಲಿರುವ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ರಾಜ್ಯದ ಜನರು ಎನ್‌ಡಿಎ ಆಡಳಿತವನ್ನು ತೊಡೆದುಹಾಕುತ್ತಾರೆ ಎಂದು ರಾಜ್ಯ ವಿಧಾನಸಭೆಯ ವಿರೋಧ ಪಕ್ಷದ ನಾಯಕ ತೇಜಸ್ವಿ ಪ್ರಸಾದ್ ಯಾದವ್ ಶುಕ್ರವಾರ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅವರಿಗೆ ಅಭಿವೃದ್ಧಿಗಾಗಿ ಯಾವುದೇ ದೃಷ್ಟಿಕೋನ ಅಥವಾ ಮಾರ್ಗಸೂಚಿ ಇಲ್ಲ ಎಂದು ಅವರು ಹೇಳಿದ್ದಾರೆ.

ರಾಜ್ಯ ವಿಧಾನಸಭೆಯ ಬಜೆಟ್ ಅಧಿವೇಶನದಲ್ಲಿ ಭಾಗವಹಿಸಲು ರಾಜ್ಯ ವಿಧಾನಸಭೆಗೆ ತೆರಳುವ ಮೊದಲು ಮಾಧ್ಯಮಗಳೊಂದಿಗೆ ಮಾತನಾಡಿದ ತೇಜಸ್ವಿ, ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಮೇಲೆ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಮಾಧ್ಯಮದ ಪ್ರಶ್ನೆಗೆ ಉತ್ತರಿಸಿದ ಅವರು, "ನಿತೀಶ್ ಬಗ್ಗೆ ತಮಗೆ ಅಪಾರ ಗೌರವವಿದೆ. ಆದರೆ ಅವರಿಗೆ ಈಗ ಸರ್ಕಾರ ನಡೆಸಲು ಸಾಧ್ಯವಾಗುತ್ತಿಲ್ಲ. ಅವರು ದಣಿದ ವ್ಯಕ್ತಿ" ಎಂದು ಅವರು ವ್ಯಕ್ತಪಡಿಸಿದ್ದಾರೆ. ವಿರೋಧ ಪಕ್ಷದ ಮಹಾಮೈತ್ರಿಕೂಟವು ಮುಂದಿನ ಸರ್ಕಾರವನ್ನು ರಚಿಸುತ್ತದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ರಾಷ್ಟ್ರೀಯ ಜನತಾದಳ (ಆರ್‌ಜೆಡಿ) ಬಿಹಾರದಲ್ಲಿ ಮಹಾಮೈತ್ರಿಕೂಟದ ಪ್ರಮುಖ ಮಿತ್ರಪಕ್ಷವಾಗಿದೆ. "ಬಿಹಾರದ ಜನರು ನಿತೀಶ್ ಕುಮಾರ್ ಅವರಿಗೆ 20 ವರ್ಷಗಳನ್ನು ಕೊಟ್ಟರು. ಆದರೆ ಈಗ ಅವರು ಅವರಿಂದ ಬೇಸತ್ತಿದ್ದಾರೆ ಮತ್ತು ಅವರನ್ನು ತೆಗೆದುಹಾಕಲು ಬಯಸುತ್ತಿದ್ದಾರೆ. ಅವರು ಸಾಕು ಎಂದು ಜನರು ಹೇಳುತ್ತಿದ್ದಾರೆ" ಎಂದು ಅವರು ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಹಮಾಸ್‌ನಿಂದ ಇಸ್ರೇಲಿನ 4 ಮೃತ ಒತ್ತೆಯಾಳುಗಳು ರೆಡ್‌ಕ್ರಾಸ್‌ಗೆ ಹಸ್ತಾಂತರ

■ ವಿಜಯಸಾಕ್ಷಿ ಸುದ್ದಿ, ಗಾಜಾ

ಗಾಜಾ ಪಟ್ಟಿಯಲ್ಲಿ ಮೊದಲ ಹಂತದ ಕದನ ವಿರಾಮ ಕೊನೆಗೊಳ್ಳುವ ಕೆಲವು ದಿನಗಳ ಮೊದಲು ಇಸ್ರೇಲ್ ನೂರಾರು ಫೆಲೆಸ್ತೀನಿಯನ್ ಕೈದಿಗಳನ್ನು ಬಿಡುಗಡೆ ಮಾಡುವುದಕ್ಕೆ ಪ್ರತಿಯಾಗಿ ಗುರುವಾರ ಮುಂಜಾನೆ ಹಮಾಸ್ ನಾಲ್ಕು ಮೃತ ಒತ್ತೆಯಾಳುಗಳನ್ನು ರೆಡ್ ಕ್ರಾಸ್ ಗೆ ಹಸ್ತಾಂತರಿಸಿದೆ.

ಇಸ್ರೇಲಿನ ಮೃತ ಒತ್ತೆಯಾಳುಗಳನ್ನು ಹಮಾಸ್ ರೆಡ್ ಕ್ರಾಸ್ ಗೆ ಹಸ್ತಾಂತರಿಸಿದೆ ಎಂದು ಇಸ್ರೇಲಿ ಭದ್ರತಾ ಅಧಿಕಾರಿಯೊಬ್ಬರು ದೃಢಪಡಿಸಿದ್ದಾರೆ. ಔಪಚಾರಿಕ ಘೋಷಣೆ ಬರುವವರೆಗೆ ಅನಾಮಧೇಯತೆಯ ಸ್ಥಿತಿಯ ಕುರಿತು ಅಧಿಕಾರಿ ಮಾತನಾಡಿದರು.

ಅದೇ ಸಮಯದಲ್ಲಿ ಡಜನ್ಗಟ್ಟಲೆ ಬಿಡುಗಡೆಯಾದ ಫೆಲೆಸ್ತೀನ್ ಕೈದಿಗಳನ್

ಗಣೇಶ ಪವಾರರಿಗೆ 'ಕಾಯಕ ರತ್ನ' ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ ಜಿಲ್ಲಾ ಮತ್ತು ತಾಲೂಕು ಘಟಕ ಕೊಪ್ಪಳ ವತಿಯಿಂದ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹನೀಯರಿಗೆ 'ಕಾಯಕ ರತ್ನ' ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ.

ಈ ಪ್ರಶಸ್ತಿಗೆ ಶ್ರೀ ಶ್ರೀ ಬ್ರ.108 ಶ್ರೀ ಸಿದ್ದೇಶ್ವರ ಮಹಾಸ್ವಾಮಿಗಳು, ಎನ್. ತಿಮ್ಮಪ್ಪ, ಮಾ.ಚಿ. ಕೃಷ್ಣ, ರಮೇಶ್ ಸುರ್ವೆ, ಡಾ. ರಾಜೇಂದ್ರ ಗಡಾದ್, ದತ್ತು ಕಮ್ಮಾರ್, ರುದ್ರಮ್ಮ ಹಾಸಿನಳ, ಅಬ್ದುಲ್ ಬೀದರಕುಂದಿ, ವಿಜಯಕುಮಾರ ಕವಲೂರ, ವೈ.ಎಚ್. ಹಳ್ಳಿಕೇರಿ, ಚಂದ್ರಶೇಖರಯ್ಯ ರೋಣದ ಮಠ, ಹಲ್ಯಾ ನಾಯಕ, ಸೊ.ದಾ. ವಿರೂಪಾಕ್ಷಿ ಗೌಡ್ರು, ಡಾ. ನಾಗರಾಜ್ ಹೀರಾ, ಬಸವರಾಜ್ ದೇವರಮನಿ, ರುದ್ರಪ್ಪ ಬಂಡಾರಿ, ಬಸವರಾಜ ಉಪ್ಪಿನ, ಅಪ್ಪಾಜಿ ಎಸ್.ಡಿ, ಮಾದೇವಪ್ಪ ವಿಶ್ವಕರ್ಮ, ಮಹಾಬಲೇಶ್ವರ ಶಾಸ್ತ್ರಿಗಳು, ಮಾಂತಯ್ಯ ಶಾಸ್ತ್ರಿ, ರಾಘವೇಂದ್ರ ಅರಿಕೇರಿ, ಗಣೇಶ್ ಪವಾರ್, ಸುನಿತಾ ವಾದಿರಾಜ ಪಾಟೀಲ್, ಬಸವಲಿಂಗಯ್ಯ ಹಿರೇಮಠ, ಅನುಸೂಯ ಜಾಗೀರದಾರ, ಕಿಶನ್ ರಾವ್ ಕುಲಕರ್ಣಿ, ಮಹೇಶ್ ಮನ್ನಾಪುರ, ಗಾಳೆಪ್ಪ ಹಿರೇಮನಿ ಇವರುಗಳು ಆಯ್ಕೆ ಆಗಿದ್ದಾರೆ.

ಮಾ. 1ರಂದು ಕೊಪ್ಪಳದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಜರುಗುವ ಜಿಲ್ಲಾ ಘಟಕ ಉದ್ಘಾಟನಾ ಸಮಾರಂಭದಲ್ಲಿ 'ಕಾಯಕ ರತ್ನ' ಪ್ರಶಸ್ತಿಯನ್ನು ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ಕೊಪ್ಪಳ ಜಿಲ್ಲಾ ಅಧ್ಯಕ್ಷ ಜಿ.ಎಸ್. ಗೋನಾಳ, ಪ್ರಧಾನ ಕಾರ್ಯದರ್ಶಿ ಡಾ. ಶಿವಬಸಪ್ಪ ಮಸ್ಕಿ, ಅಧ್ಯಕ್ಷರಾದ ಮೈಲಾರಪ್ಪ ಉಂಕಿ ಮತ್ತು ಪ್ರಧಾನ ಕಾರ್ಯದರ್ಶಿ ಸುರೇಶ್ ಕುಂಬಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್.ಎಸ್.ಎಲ್.ಸಿ. ಪರೀಕ್ಷೆ ಕುರಿತು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಸಭಾಪತಿ ಬಸವರಾಜ ಹೊರಟ್ಟಿ

ನಿಮ್ಮ ಮೇಲೆ ನಿಮಗೆ ನಂಬಿಕೆ ಇರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಪಷ್ಟ-ನಿರ್ದಿಷ್ಟ ಗುರಿ, ಗುರಿ ಸಾಧಿಸುವ ಛಲ, ಕಠಿಣ ಪರಿಶ್ರಮ, ನಿರಂತರ ಅಭ್ಯಾಸ, ಅಚಲವಾದ ಆತ್ಮವಿಶ್ವಾಸ, ಸಮಯದ ಸದ್ಬಳಕೆಯೊಂದಿಗೆ ದೈನಂದಿನ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಶಿಸ್ತನ್ನು ಅಳವಡಿಸಿಕೊಂಡು ನಿಮ್ಮ ಮೇಲೆಯೇ ನಂಬಿಕೆ ಇಟ್ಟುಕೊಂಡು ಸಾಗಿದರೆ, ಯಶಸ್ಸು ಖಂಡಿತ ಸಾಧ್ಯ ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಅವರು ತಾವು ದತ್ತು ಪಡೆದ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆ ಕುರಿತು ಏರ್ಪಡಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ತಮ್ಮ ಸುದೀರ್ಘ ಅನುಭವವನ್ನು ಹಂಚಿಕೊಂಡರು.

ಯಶಸ್ಸಿನಡೆಗೆ ವಿದ್ಯಾರ್ಥಿಗಳು ಸಾಗುವಾಗ ಹಲವಾರು ಕಷ್ಟಗಳು ಬಂದರೂ ಎದುರಿಸುವ ಆತ್ಮ ವಿಶ್ವಾಸ ಒಂದಿದ್ದರೆ ಸಾಕು. ಯಶಸ್ಸು ಅಂದರೆ

ಗೆಲವು, ಸಾಧನೆ, ನಾವು ಏನನ್ನು ಸಾಧಿಸಬೇಕೆಂದುಕೊಳ್ಳುತ್ತೇವೆಯೋ ಅದನ್ನು ಸಾಧಿಸುವುದೇ ಯಶಸ್ಸು. ಅದು ಅದೃಷ್ಟದಿಂದ, ಮತ್ತೊಬ್ಬರ ನೆರವಿನಿಂದ ಬರುವುದಿಲ್ಲ. ಯಶಸ್ಸಿಗಾಗಿ ನಾವು ಕಾಯದೇ ನಮ್ಮ ಯಶಸ್ಸಿಗೆ ನಾವೇ ದಿಟ್ಟ ಹೆಜ್ಜೆ ಇಡಬೇಕು. ಯಶಸ್ಸು ನಮ್ಮ ಹೋರಾಟದ ಫಲ. ಯಶಸ್ಸನ್ನು ನಾವೇ ಪರಿಶ್ರಮದಿಂದ ಪಡೆದುಕೊಳ್ಳಬೇಕು. ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳೆಲ್ಲ ಸಾಗಬೇಕು ಎಂದರು.

ಈ ಸಂದರ್ಭದಲ್ಲಿ ಅವ್ವ ಸೇವಾ ಟ್ರಸ್ಟ್ ನಿರ್ದೇಶಕರಾದ ಹೇಮಲತಾ ಬಸವರಾಜ ಹೊರಟ್ಟಿ, ಡಾ. ಬಸವರಾಜ ಧಾರವಾಡ, ಡಿ.ಡಿ.ಪಿ.ಐ ಆರ್.ಎಸ್. ಬುರಡಿ, ಕ್ಷೇತ್ರ ಶಿಕ್ಷಣಾಧಿಕಾರಿ ರವೀಂದ್ರ ಶೆಟ್ಟೆಪ್ಪನವರ, ಶಿಕ್ಷಣ ಸಂಯೋಜಕ ಮುರಳಿ ಸೊಲ್ಲಾಪುರ, ಪ್ರಭಾರಿ ಮುಖ್ಯೋಪಾಧ್ಯಾಯರಾದ ಜಯಲಕ್ಷ್ಮೀ ಅಣ್ಣಿಗೇರಿ, ಶಂಕ್ರಮ್ಮ ಆರ್. ಹಣಮಗೌಡ್ರು, ಎಂ.ಐ. ಶಿವನಗೌಡ್ರು, ಮಂಜುಳಾ ಪಿ.ಸಾಮ್ರಾಣಿ, ಸುಮಂಗಲ ಎಂ.ಪತ್ತಾರ್, ಶಾರದಾ ಬಾಣದ, ಶೋಭಾ ಎಸ್.ಗಾಳಿ, ರಮೇಶ್ ಬಸರಿ, ಸಾವಿತ್ರಿ ಎ.ಗದ್ದನಕೇರಿ, ಎನ್.ಆರ್. ಶಿರೋಳ್, ಸಬಿಯಾ ಯು.ಕುಷ್ಟಗಿ, ಗಂಗಾ ಎಂ.ಅಳವಂಡಿ, ಮಂಜುಳಾ ಟಿ, ಶಶಿಕಲಾ ಬಿ.ಗುಳೇದವರ, ಪದ್ಮಾ ವಿ.ದಾಸರ್, ಲಕ್ಷ್ಮಮ್ಮ ಮಾಳೋತ್ತರ್, ಶಾರದಾ ಬಾಣದ ಮುಂತಾದವರು ಉಪಸ್ಥಿತರಿದ್ದರು. ಸಂಜೀವಿನಿ ಕೂಲಗುಡಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ಜಗತ್ತಿನಲ್ಲಿ ಬಹುತೇಕ ಕ್ಷೇತ್ರದ ಸಾಧಕರೆಲ್ಲರೂ ಸೋಲನ್ನು ಗೆಲುವಿನ ಮೆಟ್ಟಿಲನ್ನಾಗಿಸಿಕೊಂಡೇ ಯಶಸ್ಸನ್ನು ಕಂಡವರು. ಹೀಗಾಗಿ ಸೋಲು, ಗೆಲುವಿನ ಬಗ್ಗೆ ಹೆಚ್ಚು ತಲೆಕೆಡಿಸಿಕೊಳ್ಳದೇ ನಿಮ್ಮ ಮೇಲೆ ನಂಬಿಕೆ ಇಟ್ಟು ಆತ್ಮವಿಶ್ವಾಸದೊಂದಿಗೆ ಹೆಜ್ಜೆ ಹಾಕಿ. ಯಶಸ್ಸು ನಿಮ್ಮ ಬಳಿಯೇ ಬರುತ್ತದೆ. ಎಸ್.ಎಸ್.ಎಲ್.ಸಿ. ಪರೀಕ್ಷೆ ವಿದ್ಯಾರ್ಥಿಗಳ ಬಹುಮುಖ್ಯ ಭಾಗವಾಗಿದೆ. ಪರೀಕ್ಷೆ ಬಗ್ಗೆ ಹೆಚ್ಚು ಟೆನ್ಶನ್ ಮಾಡಿಕೊಳ್ಳದೇ ಪರೀಕ್ಷೆಯನ್ನು ಆತ್ಮವಿಶ್ವಾಸದೊಂದಿಗೆ ಎದುರಿಸಿದರೆ ಯಶಸ್ಸು ಸಿಕ್ಕೇ ಸಿಗುತ್ತದೆ ಎಂದರಲ್ಲದೆ, ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳ ಹಲವಾರು ಪ್ರಶ್ನೆಗಳಿಗೆ ಉತ್ತರಿಸಿ ವಿದ್ಯಾರ್ಥಿಗಳಲ್ಲಿ ಚೈತನ್ಯ ಮೂಡಿಸಿದ ಬಸವರಾಜ ಹೊರಟ್ಟಿ ವಿದ್ಯಾರ್ಥಿಗಳಿಗೆ ಶುಭ ಕೋರಿದರು.

ಬಸವ ಯೋಗ ಮಂದಿರದಲ್ಲಿ ಶಿವರಾತ್ರಿ ಆಚರಣೆ

ಜ್ಞಾನದ ಕಡೆ ಸಾಗುವುದೇ ಶಿವರಾತ್ರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾಶಿವರಾತ್ರಿ ಎಂದರೆ ಇಡೀ ದಿನ ಉಪವಾಸವಿದ್ದು, ಶಿವ ಇಲ್ಲವೆ ಶಿವಲಿಂಗ ದೇವಾಲಯಗಳಲ್ಲಿನ ಮೂರ್ತಿ ದರ್ಶನ ಪಡೆದು ಫಲಾಹಾರ ಸೇವಿಸಿ ರಾತ್ರಿ ಭಜನೆ, ಕೀರ್ತನೆ, ಸಂಗೀತ ಮೂಲಕ ಜಾಗರಣೆ ಮಾಡುವುದು ಎಂಬುದು ಬಹುಜನರ ತಿಳುವಳಿಕೆಯಾಗಿದೆ. ಇದು ಸಾಂಕೇತಿಕವಾಗಿ ನಿಜವೆನಿಸಿದರೂ ತಾತ್ವಿಕವಾಗಿ ಶಿವ ಬೆಳಕಿನ ಸಂಕೇತ. ರಾತ್ರಿ ಕತ್ತಲಿನ ಸಂಕೇತ ಅಂದರೆ ಅಜ್ಞಾನದಿಂದ ಜ್ಞಾನದ ಕಡೆ ನಡೆಯುವುದು ಶಿವರಾತ್ರಿಯಾಗಿದೆ. ನಿಜಾರ್ಥದಲ್ಲಿ ನಿತ್ಯ ಶಿವಸತ್ಯ ತತ್ವಾಚರಣೆಗಳನ್ನು ಆಚರಿಸುವುದು ಶಿವರಾತ್ರಿಯಾಗಿದೆ ಎಂದು ಡಿ.ಜಿ.ಎಂ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಧ್ಯಾಪಕ ಡಾ. ಎಂ.ವಿ. ಐಹೊಳ್ಳಿ ಅಭಿಪ್ರಾಯಪಟ್ಟರು.

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಇವರು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆಸಿದ 92ನೇ ಮಾಸಿಕ ವಚನ ಶ್ರವಣ ಮತ್ತು ಮಹಾಶಿವರಾತ್ರಿ ಆಚರಣೆ ಕಾರ್ಯಕ್ರಮಗಳ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

> ಮುಖ್ಯ ಅತಿಥಿಗಳಾಗಿ ಆಗಮಿಸಿದ ಬಸವ ತತ್ವಾಭಿಮಾನಿಗಳಾದ ವೀಣಾ ಗೌಡರ ಮಾತನಾಡಿ, ಹೆಚ್ಚಿನಾಂಶ ಮಹಿಳೆಯರು ಎಲ್ಲ ಹಬ್ಬಗಳ ವಾರಸುದಾರರಾಗಿದ್ದಾರೆ. ಮಹಿಳೆಯರು ಮನೆಯಲ್ಲಿನ ಎಲ್ಲ ಸದಸ್ಯರು ಸೇರಿ ಹಬ್ಬಗಳನ್ನು ಆಚರಿಸುವಂತೆ ಪ್ರೇರೇಪಿಸಬೇಕು. ಹಿರಿ-ಕಿರಿಯರೆಲ್ಲರೂ ಸೇರಿ ಹಬ್ಬ ಆಚರಿಸಿದರೆ ಮಕ್ಕಳು ಉತ್ತಮ ಸಂಸ್ಕಾರವಂತರಾಗಿ ಸತ್ಪ್ರಜೆಗಳಾಗಿ ಬೆಳೆಯುವರು ಎಂದು ಹೇಳಿದರು.

ಶಿವರಾತ್ರಿಯನ್ನು ಆರೋಗ್ಯಕ್ಕೆ ಪೂರಕವಾಗಿ ಆಚರಿಸಬೇಕು. ಕಠಿಣ ಉಪವಾಸ ವೃತಾಚರಣೆ ಸಾಮರ್ಥ್ಯವಿದ್ದವರು ಆಚರಿಸಬೇಕು. ದಿನನಿತ್ಯ ಆಹಾರ ಸೇವನೆಯಲ್ಲಿ ಕಾಲು ಭಾಗವಾದರೂ ಫಲ (ಹಣ್ಣು-ಹಂಪಲ) ಆಹಾರ ಸೇವಿ ಆರೋಗ್ಯ ವೃದ್ಧಿಸಿಕೊಳ್ಳಬೇಕೆಂದು ಸಭಿಕರಿಗೆ ಸೂಚಿಸಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಶಿವರಾತ್ರಿ ಮಹಿಮೆ ತಿಳಿಸಿದರು. ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರ, ಶಂಕರ ದೇವನ ಡಮರುಗ ನುಡಿಯಿತು ಎಂಬ ಹಾಡಿನೊಂದಿಗೆ ಭಜನೆ ಮಾಡಿಸಿದರು. ಸಭಾಂಗಣದಲ್ಲಿ ಉಪಸ್ಥಿತರಿದ್ದ ಜಯಶ್ರೀ ವಸ್ತ್ರದ ಶಿವ ಅಷ್ಟೋತ್ತರ ಶತನಾಮಾವಳಿ ಹೇಳಿಸಿದರು. ಸುನಂದಾ ಜ್ಯಾನೋಪಂತರ ವಚನ ಸಂಗೀತ ಸೇವೆ ಸಲ್ಲಿಸಿದರು.

ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಮುಳಗುಂದ ನಾಕಾ ಶಾಖೆಯ ಸಿಬ್ಬಂದಿ ರವಿ ಹುಡೇದ ಸರ್ವರನ್ನು ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

ಎನ್ಎಸ್ಎಸ್ ಶಿಬಿರದ 6ನೇ ದಿನದ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಲ್.ಇ. ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯವು ನಾಗಾವಿ ಗ್ರಾಮದಲ್ಲಿ ಹಮ್ಮಿಕೊಂಡಿರುವ ಎನ್ಎಸ್ಎಸ್ ವಾರ್ಷಿಕ ವಿಶೇಷ ಶಿಬಿರದ 6ನೇ ದಿನದ ಕಾರ್ಯಕ್ರಮದಲ್ಲಿ ಸ್ವಯಂಸೇವಕರು ನಾಗಾವಿ ಗ್ರಾಮದ ಗ್ರಾ.ಪಂ ಆವರಣ, ಎದುರಿನ ರಸ್ತೆಯನ್ನು ಸ್ವಚ್ಛಗೊಳಿಸಿದರು. ನಂತರ ಗ್ರಾಮದ ವಿವಿಧ ಬಿದಿಗಳಲ್ಲಿ ರೈತರು, ಕೃಷಿ ಮತ್ತು ಮತದಾನದ ಬಗ್ಗೆ ಗ್ರಾಮದ ಜನರಿಗೆ ಅರಿವು ಮೂಡಿಸಿದರು.

ಸಂಜೆ ಉಪನ್ಯಾಸ ಕಾರ್ಯಕ್ರದಲ್ಲಿ ಉಪನ್ಯಾನಕರಗಿ ಆಗಮಿಸಿದ ನಟರಾಜ ರಾನಡೆ ಭಾರತದ ಆರ್ಥಿಕತೆಯಲ್ಲಿ ರೈತರ ಪಾತ್ರ ವಿಷಯವಾಗಿ ಉಪನ್ಯಾಸ ನೀಡಿ, ರೈತರ ಆರ್ಥಿಕತೆ ಸರಿ ಇದ್ದರೆ ದೇಶದ ಆರ್ಥಿಕತೆ ಸುಸ್ಥಿತಿಯಲ್ಲಿರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಕನ್ನಡ ವಿಭಾಗದ ಪ್ರಾಧ್ಯಾಪಕ ಡಾ. ರಾಮಚಂದ್ರ ಪಡೇಸೂರ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಕೃಷಿಯ ಅವಶ್ಯಕತೆಯ ಬಗ್ಗೆ ಮಾತನಾಡಿದರು. ಅತಿಥಿಗಳಾಗಿ ಮಹಾವಿದ್ಯಾಲಯದ ರಾಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಪ್ರೊ. ಚೆಂದಾಲಿಂಗ ಹಳ್ಳಿಕೇರಿ, ಎನ್ಎಸ್ಎಸ್ ಘಟಕದ ಕಾರ್ಯಕ್ರಮಾಧಿಕಾರಿ ಪ್ರೊ. ವಾಗೀಶ ರೇಶ್ಮಿ, ಕಾರ್ಯದರ್ಶಿ ಪವನಕುಮಾರ ಕುಲಕರ್ಣಿ ಮತ್ತು ಸಾಕ್ಷಿ ಹೊಸಮಠ ಸೇರಿದಂತೆ ಎಲ್ಲ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

ಸೋನಿಯಾ ಗೋಡಕೆ ಸ್ವಾಗತಿಸಿದರು, ಶಿಬಿರಾರ್ಥಿ ಮಂಜುನಾಥ ಗಾಣಗೇರ ನಿರೂಪಿಸಿದರು, ಮುಸ್ಕಾನ ಕೋಲಕಾರ ವಂದಿಸಿದರು.

ರಾಷ್ಟ್ರೀಯ ವಿಜ್ಞಾನ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಹುಲಕೋಟಿ ಗ್ರಾಮದ ಕೆ.ಎಚ್. ಪಾಟೀಲ್ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನಾ ಮಂಡಳಿ ನವದೆಹಲಿ ಮತ್ತು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿ ಬೆಂಗಳೂರು ಹಾಗೂ ಜಿಲ್ಲಾ ಪಂಚಾಯತ್ ಗದಗ ಇವರ ಸಂಯುಕ್ತಾಶ್ರಯದಲ್ಲಿ ಶುಕ್ರವಾರ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯರಾದ ಎಸ್.ಎ. ಖಾನ್ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಹುಲಕೋಟಿ ಗ್ರಾ. ಪಂ ಅಧ್ಯಕ್ಷರಾದ ನಾಗರತ್ನ ಬಳಿಹಾಳಮಠ, ಬಾಲಕಿಯರ ಪ್ರೌಢಶಾಲೆ ಹುಲಕೋಟಿಯ ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಸುಧಾ ಹಿರೇಮಠ, ಮಂಜುನಾಥ್ ಎಸ್. ತೋಟದ, ಪಿ.ಕೆ ಅವರಡ್ಡಿ, ಎಸ್.ಡಿ.ಎಂ.ಸಿ, ಸದಸ್ಯರು ಹಾಗೂ ಸಹ ಶಿಕ್ಷಕರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ-2025ರ ಪ್ರಯುಕ್ತ ನಡೆದ ಚಿತ್ರಕಲಾ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಯಿತು. ವಿಜ್ಞಾನ ವಸ್ತುಪ್ರದರ್ಶನ ಏರ್ಪಡಿಸಲಾಗಿತ್ತು.

ಎಸ್.ಎಸ್. ಪರ್ವತಿ ಪ್ರಾರ್ಥಿಸಿದರು. ಸಿ.ಪ್ಹಿ. ಅಂಬಿಗೇರ ಸ್ವಾಗತಿಸಿದರು. ಪಿ.ಪಿ. ಟಕಾರೆ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ನಗರಸಭೆ ಹಿಡಿತ ಸಾಧಿಸಿದ ಕಾಂಗ್ರೆಸ್

▶▶ ಮೊದಲನೇ ಪುಟದಿಂದ

ನಾಮಪತ್ರ ಸಲ್ಲಿಕೆ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಅಮಾನತುಗೊಂಡಿರುವ ಮೂವರು ಸದಸ್ಯರು ಹಾಗೂ ಬಿಜೆಪಿ ಮುಖಂಡರು ನಗರಸಭೆ ಕಚೇರಿ ಪ್ರವೇಶಿಸಲು ಮುಂದಾದಾಗ ಪೊಲೀಸರು ಮತ್ತು ಬಿಜೆಪಿ ಕಾರ್ಯಕರ್ತರ ಮಧ್ಯೆ ವಾಗ್ವಾದ ಏರ್ಪಟ್ಟಿತ್ತು.

ಹೈಕೋರ್ಟ್‌ನಲ್ಲಿ ನಡೆಯುತ್ತಿದ್ದ ವಿಚಾರಣೆಯಲ್ಲಿ ತೀರ್ಪು ತಮ್ಮ ಪರವಾಗಿದೆ ಎನ್ನುವ ಮಾಹಿತಿ ಲಭ್ಯವಾಗುತ್ತಿದ್ದಂತೆ ಸ್ಟೇಷನ್ ರಸ್ತೆಯಲ್ಲಿದ್ದ ಬಿಜೆಪಿ ಕಾರ್ಯಕರ್ತರು ಸಂಭ್ರಮಿಸಿದರು. ಇತ್ತ ಕಾಂಗ್ರೆಸ್ ಕಾರ್ಯಕರ್ತರು, ಚುನಾವಣೆ ಪ್ರಕ್ರಿಯೆ ಪೂರ್ಣಗೊಳ್ಳುವ ಮುನ್ನವೇ ಕೃಷ್ಣಾ ಪರಾಪುರ ಹಾಗೂ ಶಕುಂತಲಾ ಅಕ್ಕಿಯವರ ಗೆಲುವು ಸಂಭ್ರಮಿಸಿದರು. ಅಂತಿಮವಾಗಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಘೋಷಣೆಯಾಗುತ್ತಿದ್ದಂತೆ ಬಿಜೆಪಿ ಕಾರ್ಯಕರ್ತರು ಸರಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಮುದ್ರಣ ಕೆಲಸಗಾರರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮುದ್ರಣಕಾಶಿ ಮುದ್ರಣ ಕುಶಲ ಕೆಲಸಗಾರರ ಸಂಘ ಗದಗ ವತಿಯಿಂದ ಮುದ್ರಣದ ಪಿತಾಮಹ ಜೋಹಾನ್ಸ್ ಗುಟೆನ್‌ಬರ್ಗ್ ದಿನಾಚರಣೆಯನ್ನು ಸ್ಟೇಶನ್ ರಸ್ತೆಯ ಸಜ್ಜನ ಪ್ರಿಂಟಿಂಗ್ ಪ್ರೆಸ್‌ನಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮುದ್ರಣ ಕೆಲಸಗಾರರಾದ ಸಿದ್ದಪ್ಪ ಹುಬ್ಬಳ್ಳಿ, ಕೃಷ್ಣಪ್ಪ ಗುಂಡಗಿ, ಶಂಕರಪ್ಪ ಗಂಜಿ, ಮಂಜು ಮಾಗುಂಡ, ಈರಪ್ಪ ಬೇವಿನಮರದ ಇವರನ್ನು ಗೌರವಿಸಿ ಸನ್ಮಾನಿಸಲಾಯಿತು. ಸನ್ಮಾನ ಗೌರವಾಧ್ಯಕ್ಷ ಸಿದ್ದಲಿಂಗಪ್ಪ ಅರಳಿ, ಪ್ರಧಾನ ಕಾರ್ಯದರ್ಶಿ ಪರಶುರಾಮ ಬಾರಾಟಕ್ಕೆ ಸ್ವಾಗತಿಸಿದರು.

ಖಜಾಂಚಿ ಶ್ರೀಧರ ಖಟವಟೆ ಮುದ್ರಣಕಾರರು ಅನುಭವಿಸುತ್ತಿರುವ ಸಂಕಷ್ಟಗಳನ್ನು ಹೇಳಿಕೊಂಡರು. ಸದಸ್ಯರುಗಳಾದ ಅಶೋಕ ಆಫ್‌ಸೆಟ್, ಎಂ.ವಿ. ಅರಳಿ ಪ್ರಿಂಟಿಂಗ ಪ್ರೆಸ್, ಜಗಜ್ಯೋತಿ ಪ್ರಿಂಟರ್ಸ್ ದೇವ ಕಂಪ್ಯೂಟರ್ಸ್, ರಾಹುತ ಡಿ.ಟಿ.ಪಿ., ಸೋಳಂಕಿ ಸ್ಕ್ರೀನ್ಸ್ ಮತ್ತಿತರರು ಉಪಸ್ಥಿತರಿದ್ದರು. ಕೊನೆಯಲ್ಲಿ ಶಿವರಾಜ ಮೂರಶಿಳ್ಳಿನ ವಂದಿಸಿದರು.

ಸಂಸ್ಕೃತ ಸಂಭಾಷಣಾ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಫೆಬ್ರವರಿ 27ರಿಂದ ಮಾರ್ಚ್ 9ರವರೆಗೆ ಕುರ್ತಕೋಟಿಯ ಸಂಸ್ಕೃತ ಬಾಲ ಕೇಂದ್ರದಲ್ಲಿ ಸಂಸ್ಕೃತ ಸಂಭಾಷಣಾ ಶಿಬಿರವನ್ನು ಆಯೋಜಿಸಲಾಗಿದೆ. ಕುರ್ತಕೋಟಿಯ ಮುಖಂಡ ಅಪ್ಪಣ್ಣ ಅಮರಪ್ಪ ಇನಾಮತಿ ಅವರು ಆಸಕ್ತಿ ವಹಿಸಿ ಸಂಸ್ಕೃತ ಭಾರತಿ ತಂಡದ ಕಾರ್ಯಕ್ಕೆ ಸಹಕರಿಸಿದ್ದಾರೆ.

ಉದ್ಘಾಟನಾ ಕಾರ್ಯಕ್ರಮದಲ್ಲಿ ಸಂಸ್ಕೃತ ಭಾರತಿ ಜಿಲ್ಲಾ ಸ

ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸಬೇಕು



■ ವಿಜಯಸಾಕ್ಷಿ ಸುದ್ದಿ, ಗದಗ

ವಿಜ್ಞಾನವಿಲ್ಲದೆ ಮಾನವನಿಲ್ಲ, ಮಾನವನಿಲ್ಲದೆ ವಿಜ್ಞಾನವಿಲ್ಲ . ಇಂದು ನಾವು ವಿಜ್ಞಾನ ಯುಗದಲ್ಲಿದ್ದೇವೆ ಅನೇಕ ವೈಜ್ಞಾನಿಕ ಸಂಶೋಧನೆಗಳಿಂದ ನಮ್ಮ ಜೀವನದಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ವಿಜ್ಞಾನದ ಬೆಳವಣಿಗೆಯಿಂದ ಹೊಸ ಹೊಸ ಆವಿಷ್ಕಾರಗಳಿಂದ ಜಗತ್ತು ಅಭಿವೃದ್ಧಿಯ ಪಥದಲ್ಲಿ ಸಾಗುತ್ತಿದೆ ಎಂದು ಮುಖ್ಯ ಶಿಕ್ಷಕ ಮಲ್ಲೇಶ ಡಿ ಎಚ್ ಹೇಳಿದರು.

ಅವರು, ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಅಡವಿಸೋಮಾಪೂರ ಸಣ್ಣ ತಾಂಡಾದ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಸಿ ವಿ ರಾಮನ್ ಜಯಂತಿ ಅಂಗವಾಗಿ ಶಾಲಾ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವ ವಿಷಯ ಕುರಿತು ಮಾತನಾಡಿದರು.

ವಿಜ್ಞಾನವು ಮಾನವನಿಗೆ ವರವೇ ಹೊರತು ಶಾಪವಲ್ಲ. ಆದ್ದರಿಂದ ವೈಜ್ಞಾನಿಕ ಚಿಂತನೆಯ ಮನೋಭಾವ, ಮಾನವೀಯ ಗುಣಗಳನ್ನು ಬೆಳೆಸಿಕೊಂಡಾಗ ಮಾತ್ರ ವಿಜ್ಞಾನದ ಆವಿಷ್ಕಾರಗಳು ಉತ್ತಮ ಸಮಾಜಕ್ಕೆ ಪೂರಕವಾಗಬಲ್ಲವು ಎಂದರು.

ಶಿಕ್ಷಕ ಎಸ್ ಜಿ ಅಮ್ಮಿನಭಾವಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲಾ ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷೆ ಶ್ರೀಮತಿ ಪಾರವ್ವ ಉಮೇಶ ಲಮಾಣಿ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಕಿಯರಾದ ಎಸ್ ಟಿ ಹಳಕಟ್ಟಿ, ಪಿ ಬಿ ಕಿಲಬನವರ, ,ಮಾರುತಿ ಪವಾರ, ಗಂಗವ್ವ ಲಮಾಣಿ, ಸಾವಿತ್ರಿ ರಾಠೋಡ್, ದೇವಕ್ಕ ಲಮಾಣಿ ಶಾಲಾ ಮಕ್ಕಳು ಇದ್ದರು.

ಶ್ರೀ ಸಿದ್ಧೇಶ್ವರ ಜಾತ್ರಾ ಮಹೋತ್ಸವದ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

ಸುಖಮಯ ಬದುಕಿಗೆ ಆಧ್ಯಾತ್ಮ ಸಂಜೀವಿನಿ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಬದುಕಿನಲ್ಲಿ ಭೌತಿಕ ಸಂಪತ್ತು ಕೆಲವು ಕಾಲದವರೆಗೆ ಸುಖ ಕೊಡಬಹುದು. ಆಧ್ಯಾತ್ಮ ಸಂಪತ್ತು ನಿಜವಾದ ಸಂಪತ್ತು. ಸುಖ-ಶಾಂತಿಯ ಬದುಕಿಗೆ ಆಧ್ಯಾತ್ಮ ಜೀವನ ಸಂಜೀವಿನಿಯಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಸಿದ್ಧೇಶ್ವರ ಪಂಚಗೃಹ ಗುಡ್ಡದ ಹಿರೇಮಠದಲ್ಲಿ ಶ್ರೀ ಸಿದ್ಧೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬಹು ಜನ್ಮಗಳ ಪುಣ್ಯದ ಫಲದಿಂದ ಮಾನವ ಜನ್ಮ ಪ್ರಾಪ್ತವಾಗಿದೆ. ಅರಿವುಳ್ಳ ಮಾನವ ಜನ್ಮದಲ್ಲಿ ಹುಟ್ಟಿ ಬಂದ ಬಳಿಕ ಒಂದಿಷ್ಟಾದರೂ ಶಿವಜ್ಞಾನ ಸಂಪಾದಿಸದಿದ್ದರೆ, ಗುರು ಕಾರುಣ್ಯ ಪಡೆಯದಿದ್ದರೆ ಜೀವನ ವ್ಯರ್ಥವಾಗುತ್ತದೆ. ಹುಟ್ಟಿದ ಪ್ರತಿಯೊಬ್ಬ ಮನುಷ್ಯನಿಗೆ ಆಹಾರ, ಆರೋಗ್ಯ ಮತ್ತು ಆಧ್ಯಾತ್ಮ ಜ್ಞಾನ ಅವಶ್ಯಕವಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಮಾನವ ಜೀವನದ ವಿಕಾಸ ಅಭ್ಯುದಯಕ್ಕಾಗಿ ಕೊಟ್ಟ ಸಂದೇಶ ಅಂದಿಗಷ್ಟೇ ಅಲ್ಲ, ಎಂದೆಂದಿಗೂ ದಾರಿದೀಪ. ಸ್ವಧರ್ಮ ನಿಷ್ಠೆ ಮತ್ತು ಪರಧರ್ಮ ಸಹಿಷ್ಣುತೆಯಿಂದ ಬಾಳಿ ಸಾಮರಸ್ಯ ಸೌಹಾರ್ದತೆಯನ್ನು ಜೀವನದಲ್ಲಿ ಬೆಳೆಸಿಕೊಳ್ಳಬೇಕು.

ನರಗುಂದ ಪಂಚಗೃಹ ಗುಡ್ಡದ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ವಾಗ್ಮಿಗಳಾಗಿ ಸಮಕಾಲೀನ ಪರಿಜ್ಞಾನವನ್ನು ಹೊಂದಿ ಧಾರ್ಮಿಕ, ಶೈಕ್ಷಣಿಕ, ಸಾಯವ ಕೃಷಿ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಬಹಳಷ್ಟು ಕಾರ್ಯ ಮಾಡುತ್ತಿರುವುದು ತಮಗೆ ಸಂತೋಷ ತಂದಿದೆ. ಈ ಭಾಗದಲ್ಲಿ ವೀರಶೈವ ಧರ್ಮ ಸಂಸ್ಕೃತಿ-ಗುರು ಪರಂಪರೆ ಬಲವಾಗಿ ಬೆಳೆಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶ್ರೀಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ರೇಶ್ಮೆ ಮಡಿ ಫಲ ಪುಷ್ಪವಿತ್ತು ಶುಭ ಹಾರೈಸಿದರು.

> ಮುಖ್ಯ ಅತಿಥಿಗಳಾಗಿ ಆಗಮಿಸಿದ ನರಗುಂದ ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವರಾದ ಸಿ.ಸಿ. ಪಾಟೀಲ ಮಾತನಾಡಿ, ಸಕಲ ಜೀವಾತ್ಮರಿಗೆ ಒಳಿತನ್ನೇ ಬಯಸಿದ ವೀರಶೈವಕ್ಕೆ ಅಪೂರ್ವ ಇತಿಹಾಸ ಪರಂಪರೆಯಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಪೂರ್ವ ಕಾಲದಲ್ಲಿ ಕೊಟ್ಟ ಸಂದೇಶವನ್ನು 12ನೇ ಶತಮಾನದ ಬಸವಾದಿ ಶರಣರು ಪರಿಪಾಲಿಸಿ ಮತ್ತಷ್ಟು ಬೆಳೆಸಿದ ಕೀರ್ತಿ ಸಲ್ಲುತ್ತದೆ. ಬಹಳ ವರುಷಗಳ ನಂತರ ಮತ್ತೊಮ್ಮೆ ನಗರಕ್ಕೆ ಶ್ರೀ ರಂಭಾಪುರಿ ಜಗದ್ಗುರುಗಳು ಆಗಮಿಸಿರುವುದು ಭಕ್ತ ಸಂಕುಲಕ್ಕೆ ಸಂತೋಷವಾಗಿದೆ ಎಂದರು.

ಅಮ್ಮಿನಭಾವಿ ಪಂಚಗೃಹ ಹಿರೇಮಠದ ಡಾ. ಅಭಿನವ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ವೀರಶೈವ ಧರ್ಮಕ್ಕೊಂದು ಉನ್ನತ ಪರಂಪರೆಯಿದೆ. ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರಿಂದ ಸ್ಥಾಪಿತವಾದ ವೀರಶೈವ ಧರ್ಮವನ್ನು ಆಯಾ ಕಾಲ ಘಟ್ಟಗಳಲ್ಲಿ ಅನೇಕ ಮಹಾತ್ಮರು ಉಳಿಸಿ ಬೆಳೆಸಿಕೊಂಡು ಬಂದಿದ್ದಾರೆ. ನರಗುಂದ ಪಂಚಗೃಹ ಹಿರೇಮಠದ ಇತಿಹಾಸ ಪರಂಪರೆ ಶ್ರೇಷ್ಠವಾದುದು. ಇಂದಿನ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಆಧುನಿಕ ವಿಚಾರಧಾರೆಗಳೊಂದಿಗೆ ಪರಂಪರೆಗೆ ಬಹು ದೊಡ್ಡ ಶಕ್ತಿಯಾಗಿ ಕಾರ್ಯ ಮಾಡುತ್ತಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿ ನರಗುಂದ ಪಂಚಗೃಹ ಗುಡ್ಡದ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ತಾತ್ವಿಕ ಚಿಂತನಗಳ ಅವಶ್ಯಕತೆಯಿದೆ. ಮಾತು-ಮನ-ಕೃತಿ ಒಂದಾಗಿ ಬಾಳಿದಾಗ ಜೀವನದಲ್ಲಿ ಉನ್ನತಿ ಕಟ್ಟಿಟ್ಟ ಬುತ್ತಿ. ವೀರಶೈವ ಧರ್ಮದ ತತ್ವ ತ್ರಯಗಳು ಜೀವನದ ವಿಕಾಸಕ್ಕೆ ಭದ್ರ ಅಡಿಪಾಯ. ಸತ್ಯ ಶುದ್ಧ ಧರ್ಮಾಚರಣೆ ಮೂಲಕ ಬದುಕನ್ನು ಕಟ್ಟಿಕೊಳ್ಳಬೇಕಾಗಿದೆ ಎಂದರು.

ಪುರಸಭೆ ಅಧ್ಯಕ್ಷರಾದ ಅನ್ನಪೂರ್ಣ ಸಿ.ಯಲಿಗಾರ, ಪಂಚಣ್ಣ ಬೆಳವಟಗಿ, ಶಿವಾನಂದ ಮುತವಾಡ, ಅಜ್ಜಪ್ಪಗೌಡ ಪಾಟೀಲ, ಪಿ.ಎಲ್. ಪಾಟೀಲ, ಪವಾಡೆಪ್ಪ ವಡ್ಡಿಗೇರಿ, ಶಿವಾನಂದ ಮುತವಾಡ, ಎಸ್.ಎಚ್. ಪಾಟೀಲ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರು ರಕ್ಷೆ ಸ್ವೀಕರಿಸಿದರು.

ಸಮಾರಂಭಕ್ಕೂ ಮುನ್ನ ಗವಿಸಿದ್ಧೇಶ್ವರ ಶಾಸ್ತ್ರಿಗಳು ಬೂದಿಹಾಳ ಇವರಿಂದ ನವಲಗುಂದ ಶ್ರೀ ಅಜಾತ ನಾಗಲಿಂಗ ಅಜ್ಜನ ಚರಿತ್ರೆ ಕುರಿತು ಪ್ರವಚನ ನಡೆಯಿತು.

ಮಾರ್ಚ್ 3ರಿಂದ ಅಹೋರಾತ್ರಿ ಧರಣಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪ್ರಧಾನಿ ನರೇಂದ್ರ ಮೋದಿ ಕಾರ್ಮಿಕ ಕಾನೂನುಗಳನ್ನು ತಿದ್ದುಪಡಿ ಮಾಡುವುದರ ಮೂಲಕ ದೇಶವನ್ನೇ ಬಂಡವಾಳಶಾಹಿಗಳ ಕೈಗೊಪ್ಪಿಸಲು ಪ್ರಯತ್ನ ನಡೆಸಿದ್ದಾರೆ ಎಂದು ಸಿಐಟಿಯು ಸಂಘಟನೆಯ ಪೀರು ರಾಠೋಡ ಆರೋಪಿಸಿದರು.

ನಗರದ ಕೆ.ಕೆ. ವೃತ್ತದಲ್ಲಿ ಸಿಐಟಿಯು ಸಂಯೋಜಿತ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಮಾರ್ಚ್ 3ರಿಂದ ನಡೆಯಲಿರುವ ರಾಜ್ಯಮಟ್ಟದ ಅಹೋರಾತ್ರಿ ಅನಿರ್ದಿಷ್ಟಾವಧಿ ಧರಣಿಯ ಪೋಸ್ಟರ್ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಸರ್ಕಾರದ ಈ ನಿರ್ಧಾರ ಕೇವಲ ಉದ್ಯಮಗಳ ಪರವಾಗಿದೆ. ಕಾರ್ಮಿಕರ ಪರವಾಗಿಲ್ಲ. ಸರ್ಕಾರ ಕಾರ್ಮಿಕರ ಹಿತ ಕಾಪಾಡುವಲ್ಲಿ ಸಂಪೂರ್ಣ ವಿಫಲವಾಗಿದೆ. ಈ ಕಾನೂನಿನಿಂದ ಕೈಗಾರಿಕೆಗಳು ಪ್ರತಿ ಘಟಕವನ್ನು ಸ್ವತಂತ್ರ ಕಾರ್ಖಾನೆ ಎಂದು ತೋರಿಸಲು ಮತ್ತು ಯಾವುದೇ ಭಯವಿಲ್ಲದೆ ಕಾರ್ಮಿಕರನ್ನು ವಜಾಗೊಳಿಸಲು

ಅನುವು ಮಾಡಿಕೊಟ್ಟಂತಾಗಿದೆ ಎಂದು ಸರ್ಕಾರದ ನೀತಿಯನ್ನು ಖಂಡಿಸಿದರು.

ಸಿಐಟಿಯ ಮುಖಂಡ ಮೆಹಬೂಬ್ ಹವಾಲ್ದಾರ್ ಮಾತನಾಡಿ, ಕಟ್ಟಡ ಕಾರ್ಮಿಕರಿಗೆ ರಾಜ್ಯ ಸರ್ಕಾರ ಈ ಬಜೆಟ್‌ನಲ್ಲಿ 500 ಕೋಟಿ ರೂ ಮೀಸಲಿಡುವ ಮೂಲಕ ಕಾರ್ಮಿಕರಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸಬೇಕು. ಎಲ್ಲ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಿ ಅವರ ಹಿತ ಕಾಯಲು ಮುಂದಾಗಬೇಕು. ಈ ಹಿನ್ನೆಲೆಯಲ್ಲಿ ಅಸಂಘಟಿತ ಕಾರ್ಮಿಕ ಸಂಘಟನೆಗಳ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ರಾಜ್ಯಮಟ್ಟದ ಈ ಅನಿರ್ದಿಷ್ಟಾವಧಿ ಧರಣಿಯನ್ನು ನಡೆಸಲಾಗುತ್ತಿದ್ದು, ಸಿಐಟಿಯು ಸಂಯೋಜಿತ ಸಂಘಟನೆಗಳು ಪಾಲ್ಗೊಳ್ಳುತ್ತಿವೆ. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯುವ ಈ ಹೋರಾಟಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಕಾರ್ಮಿಕರು, ಹೊರಗುತ್ತಿಗೆ ನೌಕರರು, ಗ್ರಾಮ ಪಂಚಾಯಿತಿ ನೌಕರರು ಪಾಲ್ಗೊಳ್ಳಲು ತಿಳಿಸಿದರು.

ಈ ವೇಳೆ ಕೃಷಿ ಕೂಲಿಕಾರರ ಸಂಘಟನೆ ಮುಖಂಡ ಬಾಲು ರಾಠೋಡ, ಅಂಬರೇಷ ಚವ್ಹಾಣ, ಅನ್ವರಭಾಷಾ ಕೊಪ್ಪಳ, ಕಳಕೇಶ ಮಾಳೋತ್ತರ, ಚನ್ನಪ ಹೂಗಾರ, ನೀಲವ್ವ ಅಜಮೀರ, ಮಾರುತಿ ಹೂಗಾರ, ರವಿಕುಮಾರ ಹೂಗಾರ, ಮುತ್ತಮ್ಮ ಹೂಗಾರ, ವೀರೇಶ ಹೂಗಾರ, ಗೌರಮ್ಮ ಹೂಗಾರ ಸೇರಿದಂತೆ ವಿವಿಧ ವಲಯದ ಮುಖಂಡರು ಪಾಲ್ಗೊಂಡಿದ್ದರು.

ಸರಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಾರ್ವಜನಿಕರಿಗೆ ಅನುಕೂಲ ವಾಗಲೆಂದು ಸರಕಾರ ಅನೇಕ ಯೋಜನೆಗಳನ್ನು ಜಾರಿಗೊಳಿಸುತ್ತದೆ. ಅವುಗಳ ಸದುಪಯೋಗ ಪಡೆದುಕೊಂಡು ಜೀವನದಲ್ಲಿ ನೆಮ್ಮದಿಯನ್ನು ಪಡೆಯಿರಿ ಎಂದು ಪಟ್ಟಣ ಪಂಚಾಯತಿ ಅಧ್ಯಕ್ಷ ಫಕೀರಪ್ಪ ಮಳ್ಳಿ ಹೇಳಿದರು.

ಪಟ್ಟಣ ಪಂಚಾಯತಿಯ ಸಭಾಭವನದಲ್ಲಿ ಇ-ಖಾತಾ ಅಭಿಯಾನ ಕುರಿತು ನರೇಗಲ್ಲದ ಸಾರ್ವಜನಿಕರಿಗೆ ಎ ಮತ್ತು ಬಿ ಖಾತೆ ಪಡೆದುಕೊಳ್ಳಲು ಭಿತ್ತಿಪತ್ರಗಳನ್ನು ವಿತರಿಸಿ ಅವರು ಮಾತನಾಡಿದರು.

ಎ ಖಾತೆ ಪಡೆದುಕೊಳ್ಳಲು ಬಯಸುವವರು ಭೂ ಪರಿವರ್ತನಾ ಆದೇಶ, ಬಡಾವಣೆ ನಕ್ಷೆ, ಸ್ವತ್ತಿನ ಮಾಲೀಕತ್ವವನ್ನು ದೃಢೀಕರಿಸುವ ಕ್ರಯ/ದಾನ/ವಿಲ್/ಹಕ್ಕುಪತ್ರ/ವಿಭಾಗ ಪತ್ರ, ನಮೂನೆ 15ರಲ್ಲಿ ಪಡೆದ ಋಣಭಾರ ರಾಹಿತ್ಯ ಪ್ರಮಾಣ ಪತ್ರ(ಇ.ಸಿ), ಮಾಲೀಕರ ಭಾವಚಿತ್ರ, ಸ್ವತ್ತಿನ ಜಿಪಿಎಸ್ ಛಾಯಾಚಿತ್ರ, ಮಾಲೀಕರ ಗುರುತಿನ ಚೀಟಿ, ಆಧಾರ್ ಕಾರ್ಡ್, ಪಾನ್ ಕಾರ್ಡ್, ಚಾಲ್ತಿ ಸಾಲಿನವರೆಗೆ ಕಂದಾಯ ಪಾವತಿಸಿರುವ ರಸೀದಿ, ವಿದ್ಯುತ್ ಬಿಲ್, ನಲ್ಲಿ ಸಂಪರ್ಕ ಹೊಂದಿದ್ದಲ್ಲಿ ನೀರಿನ ಕಂದಾಯ ಪಾವತಿಸಿರುವ ರಸೀದಿಗಳನ್ನು ಸಲ್ಲಿಸಿ ಎ-ಖಾತೆಯನ್ನು ಪಡೆದುಕೊಳ್ಳಬಹುದು ಎಂದರು.

ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ ಮಾತನಾಡಿ, ಬಿ ಖಾತೆ ಪಡೆಯಬಯಸುವವರು ಅನಧಿಕೃತ ಬಡಾವಣೆಯ ಭೂ ಪರಿವರ್ತನ ಆದೇಶ, ಸ್ವತ್ತಿನ ಮಾಲೀಕತ್ವದ ಪ್ರಮಾಣಪತ್ರ, ಕಟ್ಟಡವಾಗಿದ್ದಲ್ಲಿ ಕಟ್ಟಡದ ನಕ್ಷೆ ಮತ್ತು ಪರವಾನಗಿ ಪತ್ರ, ಆಸ್ತಿಗೆ ಸಂಬಂಧಿಸಿದಂತೆ ಸ್ವತ್ತಿನ ಮಾಲೀಕತ್ವ ಸಾಬೀತುಪಡಿಸುವ ದಿ. 10-19-2024ರ ಪೂರ್ವದಲ್ಲಿ ನೋಂದಾಯಿತ ಮಾರಾಟ ಪತ್ರಗಳು/ದಾನಪತ್ರ/ವಿಭಾಗ ಪತ್ರಗಳು/ಹಕ್ಕು ಖುಲಾಸೆ ಇತ್ಯಾದಿಗಳೊಂದಿಗೆ ಕಂದಾಯ ರಸೀದಿ, ನೀರಿನ ರಸೀದಿ, ವಿದ್ಯುತ್ ಬಿಲ್ ಇವುಗಳನ್ನು ಸಲ್ಲಿಸಿ ಬಿ ಖಾತೆಯನ್ನು ಪಡೆಯಬಹುದು ಎಂದರು.

ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಮಾತನಾಡಿ, ಹೆಚ್ಚಿನ ಮಾಹಿತಿ ಏನಾದರೂ ಬೇಕಾದರೆ ದೂರವಾಣಿ-9449483569ಗೆ ಕರೆ ಮಾಡಬಹುದು. ಇಲ್ಲವೆ ಹೆಲ್ಪ್‌ಲೈನ್ ಸಿಬ್ಬಂದಿ, ಕಂದಾಯ ವಿಭಾಗದ ಕರ ವಸೂಲಿಗಾರರನ್ನು, ಕಂದಾಯ ನಿರೀಕ್ಷಕರನ್ನು ಕಚೇರಿಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದೆಂದರು.

ಭಿತ್ತಿಪತ್ರ ವಿತರಣೆಯ ಸಂದರ್ಭದಲ್ಲಿ ಕಂದಾಯ ನಿರೀಕ್ಷಕ ರಾಮಪ್ಪ ಸೀತಿಮನಿ, ಕಂದಾಯ ಕರ ವಸೂಲಿಗಾರರು, ಹೊನವಾಡ ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

ಮುಕ್ತಿಮಂದಿರ ಕ್ಷೇತ್ರದ ಶಿವರಾತ್ರಿ ಜಾತ್ರಾ ಮಹೋತ್ಸವದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

ಒಡೆದ ಮನಸ್ಸುಗಳನ್ನು ಬೆಸೆಯುವುದೇ ಧರ್ಮ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾನವೀಯತೆಯ ಆದರ್ಶ ಮೌಲ್ಯಗಳು ಬೆಳೆದು ಬರಬೇಕು. ಮಾನವೀಯತೆಯಲ್ಲಿ ವಿಶ್ವಾಸವನ್ನು ಯಾವತ್ತೂ ಕಳೆದುಕೊಳ್ಳಬಾರದು. ಮಾತು ಒಂದುಗೂಡಿಸಬೇಕೇ ಹೊರತು ಒಡೆಯಬಾರದು. ಒಡೆದ ಮನಸ್ಸುಗಳನ್ನು ಬೆಸೆಯುವುದೇ ನಿಜವಾದ ಧರ್ಮವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಸಮೀಪದ ಮುಕ್ತಿಮಂದಿರ ಕ್ಷೇತ್ರದಲ್ಲಿ ಶಿವರಾತ್ರಿ ಜಾತ್ರಾ ಮಹೋತ್ಸವ ಹಾಗೂ ಲಿಂ. ಶ್ರೀ ರಂಭಾಪುರಿ ವೀರರುದ್ರಮುನಿ ಜಗದ್ಗುರುಗಳವರ ಜನ್ಮ ಶತಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸುಖ ಬಯಸುವುದು ಮನುಷ್ಯನ ಸಹಜ ಗುಣ. ದುರ್ನಡತೆಯಿಂದಾಗಿ ಮನುಷ್ಯನ ಬದುಕು ಛಿದ್ರಗೊಂಡಿದೆ. ಹೊನ್ನು-ಹೆಣ್ಣು-ಮಣ್ಣಿಗಾಗಿ ಬಡಿದಾಡಿ ಸತ್ತವರು ಕೋಟಿ ಕೋಟಿ ಜನ. ಆದರೆ ಭಗವಂತನಿಗಾಗಿ ಹಂಬಲಿಸಿದವರು ಬಹಳಷ್ಟು ವಿರಳ. ಮಹಾನುಭಾವರಿಗೆ ಸತ್ಯವೇ ಸಂಪತ್ತು, ಧರ್ಮವೇ ಉಸಿರು. ನದಿ ಜನರ ದಾಹವನ್ನು ಹಿಂಗಿಸುತ್ತದೆ. ವೃಕ್ಷವು ನೆರಳು ಹೂ-ಹಣ್ಣು ಕೊಡುತ್ತದೆ. ಮಳೆಯಿಂದ ಬೆಳೆ ಉಂಟಾಗುತ್ತದೆ. ಸತ್ಪುರುಷರು ಜ್ಞಾನ ಸುಧೆಯನ್ನು ಹಂಚುವುದರ ಮೂಲಕ ಇತರರ ಬಾಳಿಗೆ ಬೆಳಕು ತೋರುತ್ತಾರೆ.



> ಎಮ್ಮಿಗನೂರು ವಾಮದೇವ ಮಹಂತ ಶಿವಾಚಾರ್ಯರು ಸಮಾರಂಭವನ್ನು ಉದ್ಘಾಟಿಸಿದರು. ನೇತೃತ್ವ ವಹಿಸಿದ ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಮಾತನಾಡಿ, ಮನಸ್ಸಿದ್ದರೆ ಮಾರ್ಗಗಳು ಕಾಣುತ್ತವೆ. ಮನಸ್ಸಿಲ್ಲದಿದ್ದರೆ ನೂರಾರು ನೆಪಗಳು ಮುಂದೆ ಬರುತ್ತವೆ. ಸುಳ್ಳಿನ ಜೊತೆ ದುಷ್ಟರ ಶಕ್ತಿ ಇದ್ದರೆ ಸತ್ಯದ ಜೊತೆ ದೈವಶಕ್ತಿ ಇರುತ್ತದೆ. ಲಿಂ. ಶ್ರೀ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಮತ್ತು ಲಿಂ.ಶ್ರೀ ರಂಭಾಪುರಿ ವೀರರುದ್ರಮುನಿ ಜಗದ್ಗುರುಗಳು ಧರ್ಮ ಮುಖಿಯಾಗಿಸಮಾಜ ಮುಖಿಯಾಗಿ ಕಾರ್ಯ ನಿರ್ವಹಿಸಿದರೆಂದರು.

ಜಗದ ಜನತೆಗ